# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –250 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:28–04–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 250 | RNI No: KARKAN/2023/88462 | KA/SK/CTA-874/2024-2026 | Chitradurga | Date: 28-04-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಶಾಂತಿ ಸಾಗರ ರಕ್ಷಣೆಗೆ ರೈತರೂ ಮುಂದಾಗಬೇಕು: ಉಪಲೋಕಾಯುಕ್ತ 2

6 ತಿಂಗಳಿಗೊಮ್ಮೆ ನಿಮ್ಮ ರಾಸುಗಳಿಗೆ ರೋಗ ನಿರೋಧಕ ಲಸಿಕೆ ಹಾಕಿಸಿ 3

ಹೊಸದುರ್ಗ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು ಹೃದಯಾಘಾತದಿಂದ ನಿಧನ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 29ಕ್ಕೆ ಸಾರಿಗೆ ಅದಾಲತ್

» ಚಿತ್ರದುರ್ಗ

ಪ್ರಾದೇಶಿಕ ಸಾರಿಗೆ ಅಧಿಕಾರಿಗಳವರ ಕಚೇರಿ ವತಿಯಿಂದ ಇದೇ ಏ.29 ರಂದು ಸಂಜೆ 4 ರಿಂದ 5.30 ರವರೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಆವರಣದಲ್ಲಿ ಸಾರಿಗೆ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆ ಆಲಿಸಲು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ "ಸಾರಿಗೆ ಅದಾಲತ್" ಏರ್ಪಡಿಸಲಾಗಿದೆ. ಸಾರ್ವಜನಿಕರು ಸಾರಿಗೆ ಅದಾಲತ್‌ನಲ್ಲಿ ಭಾಗವಹಿಸಿ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಹಾಗೂ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬೇಕು ಹಾಗೂ ಸಾರಿಗೆ ಅದಾಲತ್‌ನ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು.

### ಕಾಯಕರತ್ನ ಪ್ರಶಸ್ತಿಗೆ ಆಯ್ಕೆ

» ಚಿತ್ರದುರ್ಗ

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ವತಿಯಿಂದ ನೀಡುವಂತ ಕಾಯಕರತ್ನ ಪ್ರಶಸ್ತಿಗೆ ಚಿತ್ರದುರ್ಗ ಜಿಲ್ಲೆಯಿಂದ 2025ನೇ ಸಾಲಿಗೆ ಚಿತ್ರದುರ್ಗದಲ್ಲಿ ವಿವಿಧೆಡೆ ಸಸಿಗಳನ್ನು ನಡೆವುದರ ಮೂಲಕ ಚಿತ್ರದುರ್ಗವನ್ನು ಹಸಿರಾಗಿಸುವ ಕನಸನ್ನು ಕಂಡಿರುವ ಟಾರ್‌ಗೇಟ್ ಗ್ರೂಪ್‌ನ ಮುಖ್ಯಸ್ಥರಾದ ಸಿದ್ದರಾಜು ಜೋಗಿಯವರನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ವೈಜ್ಞಾನಿಕ ಪರಿಷತ್‌ನ ಅಧ್ಯಕ್ಷರಾದ ನಾಗರಾಜ್ ಸಂಗಂ ಹಾಗೂ ಕಾರ್ಯದರ್ಶಿ ಪಿ.ಲೋಕೇಶ್ ತಿಳಿಸಿದ್ದಾರೆ.

ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು ಸಿದ್ದರಾಜು ಜೋಗಿಯವರ ತಂಡ 2016ರಲ್ಲಿ ಚಿತ್ರದುರ್ಗದ ವಿವಿಧೆಡೆಗಳಲ್ಲಿ ಸಸಿಗಳನ್ನು ನಡುವ ಕಾರ್ಯಕ್ಕೆ ಮುಂದಾಗಿತ್ತು ಇದಕ್ಕೆ ನಗರದ ಜನತೆಯೂ ಸಹಾ ಸಹಕಾರವನ್ನು ನೀಡಿದ್ದರ ಫಲವಾಗಿ ಇಂದು ಸುಮಾರು 40 ಸಾವಿರ ಸಸಿಗಳನ್ನು ನಗರದ ವಿವಿಧ ಬಡಾವಣೆ, ಶಾಲಾ–ಕಾಲೇಜುಗಳ ಆವರಣ, ರಸ್ತೆಗಳ ಬದಿಗಳಲ್ಲಿ, ನಡೆವುದರ ಮೂಲಕ ಅವುಗಳ ಬೆಳವಣಿಗೆಗೆ ವಾರದಲ್ಲಿ ಒಂದು ದಿನ ಇದಕ್ಕಾಗಿ ಮೀಸಲಿಟ್ಟು ಅವುಗಳನ್ನು ಬೆಳಸಿದ್ದಾರೆ. ಇದರ ಅಂಗವಾಗಿ ಚಿತ್ರದುರ್ಗದಲ್ಲಿ ಟಾರ್‌ಗೆಟ್ 10 ಥೌಜೆಂಡ್ ಎಂಬ ಗ್ರೂಪ್ ಮಾಡಿಕೊಂಡು ಸಸಿಗಳನ್ನು ನೆಟ್ಟು ಅವುಗಳನ್ನು ಬೆಳಸುತ್ತಿದ್ದಾರೆ ಇವರ ಕಾಯಕವನ್ನು ಗುರುತಿಸಿದ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ 2025ನೇ ಸಾಲಿಗೆ ಇವರನ್ನು ಕಾಯಕ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿದೆ ಎಂದು ತಿಳಿಸಿದ್ದಾರೆ.

ಈ ಪ್ರಶಸ್ತಿ ಪ್ರಧಾನ ಸಮಾರಂಭವೂ ಮೇ.1 ರಂದು ಬಾಗಲಕೋಟೆಯ ರಬಕವಿ ಗ್ರಾಮದಲ್ಲಿ ಬೆಳ್ಳಿಗೆ 11ಕ್ಕೆ ನಡೆಯಲಿದೆ. ಈ ಹಿಂದೆ ಇದೇ ರೀತಿಯ ಪ್ರಶಸ್ತಿಗೆ ಚಿತ್ರದುರ್ಗದಿಂದ ಟೈಗರ್ ತಿಪ್ಪೇಸ್ವಾಮಿ, ಕೆ.ಎಸ್.ಆರ್.ಟಿ.ಸಿಯ ಚಾಲಕ ಶಾಂತಕುಮಾರ್ ಹಾಗೂ ಕೋಟೆ ವಾಯು ವಿಹಾರದ ಅಧ್ಯಕ್ಷರಾದ ಸತ್ಯಣ್ಣ ರವರಿಗೆ ಪ್ರಧಾನ ಮಾಡಲಾಗಿತ್ತು. ಮೇ1 ರಂದು ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಚಿತ್ರದುರ್ಗದ ಜಿಲ್ಲಾ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಪದಾಧಿಕಾರಿಗಳು ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ನಾಗರಾಜ್ ಸಂಗಂ ತಿಳಿಸಿದ್ದಾರೆ.

### ತ್ರೈಮಾಸಿಕ ಕೆಡಿಪಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ ಮೇ 02 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆಯಲ್ಲಿ ಮತ್ತು ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅವರ ಉಪಸ್ಥಿತಿಯಲ್ಲಿ ಸಭೆ ನಿಗದಿಪಡಿಸಲಾಗಿದೆ. ಸಭೆಯಲ್ಲಿ ವಿವಿಧ ಇಲಾಖೆಗಳ ಕಳೆದ ಮಾರ್ಚ್ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ನಡೆಯಲಿದೆ.

### ಡಾ.ಅರ್ಚನಾ ಮಜುಂದಾರ್ ಪ್ರವಾಸ

» ದಾವಣಗೆರೆ

ಮಾನ್ಯ ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯೆ ಡಾ.ಅರ್ಚನಾ ಮಜುಂದಾರ್ ಇವರು ಏಪ್ರಿಲ್ 28 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಏಪ್ರಿಲ್ 28 ರಂದು ದಾವಣಗೆರೆಗೆ ಆಗಮಿಸಿ ಸಂತ್ರಸ್ತರು, ಅವರ ಕುಟುಂಬಸ್ಥರು ಮತ್ತು ಜಿಲ್ಲಾಧಿಕಾರಿ ಹಾಗೂ ಎ□□ಪಿ ಸದಸ್ಯರೊಂದಿಗೆ ಸಭೆ ನಡೆಸುವರು.

# ರಾಜ್ಯದಲ್ಲಿ ಮಾದಿಗರ ಸಂಖ್ಯೆ ಹೆಚ್ಚು

## ಜಾತಿಗಣತಿ ವೇಳೆ ಸಂಭ್ರಮ ಮರೆಯಬೇಕು –ಹಬ್ಬ, ಉತ್ಸವ, ಜಯಂತಿ ಆಚರಣೆ ಬೇಡ –ಮಾಜಿ ಸಚಿವಎಚ್.ಆಂಜನೇಯ ಹೇಳಿಕೆ

» ಚಿತ್ರದುರ್ಗ

ರಾಜ್ಯದಲ್ಲಿ ಪರಿಶಿಷ್ಟಜಾತಿಯಲ್ಲಿ ಕೆಲವರು ನಾವು ಹೆಚ್ಚು ಸಂಖ್ಯೆಯಲ್ಲಿದ್ದೇವೆಎಂದು ಹೇಳುತ್ತಿದ್ದಾರೆ. ಆದರೆ, ವಾಸ್ತವವಾಗಿ ಮಾದಿಗರ ಸಂಖ್ಯೆ ಹೆಚ್ಚಿದ್ದು, ಆದಿಕರ್ನಾಟಕ, ಆದಿದ್ರಾವಿಡ, ಆದಿಆಂಧ್ರ ಹೆಸರಿನಲ್ಲಿ ಗುರುತಿಸಿಕೊಂಡಿರುವುದು ಗೊಂದಲಕ್ಕೆಕಾರಣವಾಗಿದೆಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷಎಚ್. ಆಂಜನೇಯ ಹೇಳಿದರು.

ಬೆಂಗಳೂರಿನ ಅಂಬೇಡ್ಕರ್ ಭವನದಲ್ಲಿ ಭಾನುವಾರ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ನೇತೃತ್ವದಲ್ಲಿ ಆಯೋಜಿಸಿದ್ದ ಜಾತಿಗಣತಿ ವೇಳೆ ಮಾದಿಗರ ಪಾತ್ರವೇನುಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದರು.

ಆಂಧ್ರದಲ್ಲಿ ಮಂದಕೃಷ್ಣ ಆರಂಭಿಸಿದ ಮಾದಿಗ ಒಳಮೀಸಲಾತಿ ಹೋರಾಟರಾಜ್ಯದಲ್ಲಿತನ್ನಕಿಚ್ಚನ್ನು ಹಚ್ಚಿತ್ತು. ಇದಕ್ಕಾಗಿ 30 ವರ್ಷಗಳ ಚಳವಳಿ ನಡೆದಿದೆ. ಈಗ ಸುಪ್ರೀಂಕೋರ್ಟ್ ಒಳಮೀಸಲಾತಿ ಜಾರಿಅಧಿಕಾರರಾಜ್ಯ ಸರ್ಕಾರಗಳಿಗೆ ಇದೆ ಎಂಬ ಮಹತ್ವದತೀರ್ಪು ನೀಡಿದೆಎಂದರು.

ಈಗಾಗಲೇ ತೆಲಂಗಾಣ ಸೇರಿ ಕೆಲವೆಡೆ ಒಳಮೀಸಲಾತಿ ಜಾರಿಗೆಅಲ್ಲಿನ ಸರ್ಕಾರಗಳು ಕ್ರಮಕೈಗೊಂಡಿವೆ. ಅದೇರೀತಿರಾಜ್ಯದಲ್ಲಿ ಸಾಮಾಜಿಕ ಹರಿಕಾರ, ಸಮ ಸಮಾಜದಕಲ್ಪನೆಯ ಅನುಷ್ಠಾನಕ್ಕೆ ಶ್ರಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಒಳಮೀಸಲಾತಿ ಜಾರಿಗೊಳಿಸಲು ದಿಟ್ಟಕ್ರಮಕೈಗೊಂಡಿದ್ದಾರೆ.ಸರ್ಕಾರಿ ಉದ್ಯೋಗಗಳ ನೇಮಕಾತಿಗೆತಡೆ ನೀಡಿದ್ದು,



ಒಳಮೀಸಲಾತಿ ನೀವು ಬೇಡಎಂದರೂ ನಾನು ಜಾರಿಗೊಳಿಸಿಯೇ ಸಿದ್ಧ ಎಂದು ಸಿದ್ದರಾಮಯ್ಯ ಘೋಷಿಸಿದ್ದಾರೆ ಎಂದು ಹೇಳಿದರು.

ಸುಪ್ರೀಂಕೋರ್ಟ್ ಆದೇಶದಂತೆ ದತ್ತಾಂಶ (ಎಂಪೋರಿಯಲ್‌ಡಾಟಾ) ಸಂಗ್ರಹಕ್ಕೆರಾಜ್ಯ ಸರ್ಕಾರ ಮೇ 5ರಿಂದ 17ರವರೆಗೆ ರಾಜ್ಯದಲಿ ಪರಿಶಿಷ್ಟ ಜಾತಿಗೆ ಸೀಮಿತಗೊಳಿಸಿ ಜಾತಿಗಣತಿಕಾರ್ಯಕ್ಕೆ ದಿಟ್ಟ ಕ್ರಮಕೈಗೊಂಡಿದೆ.ಈ ಅವಧಿಯಲ್ಲಿ ಮಾದಿಗ ಸಮುದಾಯದವರು ಅತ್ಯಂತ ಜವಾಬ್ದಾರಿಯುತವಾಗಿ ವರ್ತಿಸಬೇಕುಎಂದರು.ಮಾದಿಗ ಸಮುದಾಯಜಾತಿ, ಉತ್ಸವ, ಹಬ್ಬ, ಜಯಂತಿಗಳ ಆಚರಣೆಯಲ್ಲಿ ಮುಳುಗುವ ಮುಗ್ಧ ಸಮುದಾಯ.ಇಂತಹ ಆಚರಣೆಗಳನ್ನು ಜಾತಿಗಣತಿ ಕಾರ್ಯ ಮುಗಿಯುವವರೆಗೂಆಚರಿಸಬಾರದು. ನಮ್ಮಗುರಿ ಜಾತಿಗಣತಿಯತ್ತಇರಬೇಕು ಎಂದು ತಿಳಿಸಿದರು.

ಹೋರಾಟ, ಚಳವಳಿ, ಜಯಂತಿಇತರೆ ನೆಪದಲ್ಲಿ ಗುಂಪು ಗುಂಪಾಗಿ ಸೇರುವುದು, ಹಬ್ಬಆಚರಿಸುವುದುಎಲ್ಲವನ್ನುಕೈಬಿಡಬೇಕು. ಇಂದಿನಿಂದಲೇಜಾತಿಗಣತಿಕಾರ್ಯ ಪೂರ್ಣಗೊಂಡು ಒಳಮೀಸಲಾತಿ ಜಾರಿಗೊಳ್ಳುವವರೆಗೂ ನಾವೆಲ್ಲರೂ ಕಾಲೋನಿ,ಹಟ್ಟಿ,ಬಡಾವಣೆಗಳನಮ್ಮನಮ್ಮ ಮನೆಗಳಲ್ಲಿ ಇದ್ದು, ಜಾತಿಗಣತಿದಾರರು ಬಂದಾಗಅವರೊಂದಿಗೆ ಸೇರಿ ಬಡಾವಣೆ ಸುತ್ತಬೇಕು.ಸಮುದಾಯದವರಲ್ಲಿ ಮಾದಿಗಎಂದುಕಡ್ಡಾಯವಾಗಿ ಬರೆಸುವಕುರಿತುಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಯಾವುದೇಕಾರಣಕ್ಕೂಆದಿಕರ್ನಾಟಕ, ಆದಿದ್ರಾವಿಡ, ಆದಿಆಂಧ್ರ ಎಂಬ ಸೂಚಕವನ್ನು ಬರೆಸಲೇಬಾರದು. ಮಾದಿಗಎಂದೇ ನಾವೆಲ್ಲರೂ ಬರೆಸಯಬೇಕು. ಈಗಾಗಲೇ ನ್ಯಾ.ನಾಗಮೋಹನ್‌ದಾಸ್‌ಆಯೋಗಕ್ಕೆದತ್ತಾಂಶ ಸಂಗ್ರಹ ಮಾಡಲು ಸವಾಲು ಆಗಿತ್ತು. ಆದ್ದರಿಂದಲೆ ನಾವು ಸಿದ್ದರಾಮಯ್ಯ ಅವರ ಬಳಿ ಮನವಿ ಮಾಡಿಕೊಂಡತಕ್ಷಣವೇ ಪರಿಶಿಷ್ಟ ಜಾತಿಗೆ ಸೀಮಿತಗೊಳಿಸಿ ಜಾತಿಗಣತಿಕಾರ್ಯಕ್ಕೆ ಮುಂದಾಗಿದೆ.ಈ ವೇಳೆ ನಾವು ಬಹಳಷ್ಟು ಜಾಗೃತಿ ವಹಿಸಿ, ಸಮುದಾಯದಯಾವೊಬ್ಬರೂಕೂಡ ಹೊರಗುಳಿಯದಂತೆ ಎಚ್ಚರವಹಿಸಬೇಕು ಎಂದರು.

ಮಂದಕೃಷ್ಣಮಾದಿಗಒಳಮೀಸಲಾತಿಯ ಜನಕನಾಗಿದ್ದು, ಆಂಧ್ರದಲ್ಲಿಚಂದ್ರಬಾಬು ನಾಯ್ಡು ಮೊದಲ ಬಾರಿಗೆ ಒಳಮೀಸಲಾತಿ ಜಾರಿಗೊಳಿಸಿದರು.ಆದರೆ, ನಮ್ಮ ಪ್ರಗತಿ ಸಹಿಸಿದ ಕೆಲವರುಕೋರ್ಟ್ ಮೊರೆ ಹೋಗಿದ್ದರಿಂದ ಒಳಮೀಸಲಾತಿ ಜಾರಿಗೆ 25 ವರ್ಷ ಬೇಕಾಯಿತು. ಈಗ ಸುಪ್ರೀಂಕೋರ್ಟ್‌ಅಸ್ಪೃಶ್ಯ ಸಮಾಜಕ್ಕೆ ಉಸಿರು ಕೊಟ್ಟಿದ್ದು, ಅದನ್ನು ಗಟ್ಟಿಗೊಳಿಸಲು ಸಿದ್ದರಾಮಯ್ಯ ಸರ್ಕಾರ ಮುಂದಾಗಿದೆಎಂದು ಹೇಳಿದರು.

ಆಂಧ್ರದಲ್ಲಿ ಮಾದಿಗ ಸಮುದಾಯ ಆಯೋಜಿಸಿದ್ದ ಒಳಮೀಸಲಾತಿ ಹೋರಾಟದಲ್ಲಿ ಸಚಿವ ಸ್ಥಾನ ಪಣಕ್ಕಿಟ್ಟು ಈ ಹಿಂದೆ ನಾನು ಪಾಲ್ಗೊಂಡಿದ್ದೆ.ನನಗೆ ಮಾದಿಗ ಸಮುದಾಯದ ಪ್ರಗತಿ ಮುಖ್ಯ. ಈಗಅಲ್ಲಿಒಳಮೀಸಲಾತಿಜಾರಿಗೊಂಡಿದ್ದು, ರಾಜ್ಯದಲ್ಲಿ ದಿನಗಣನೆಆರಂಭವಾಗಿದೆ. ಅದರ ಭಾಗವಾಗಿಯೇಜಾತಿಗಣತಿಕಾರ್ಯಎಂದರು.

ರಾಜ್ಯದಲ್ಲಿ ಒಳಮೀಸಲಾತಿ ಹಂಚಿಕೆ ವೇಳೆ ನಮಗೆ ಹೆಚ್ಚು ಪಾಲು ದೊರೆಯಲೇಬೇಕು. ಅದಕ್ಕೆ ನಾವೆಲ್ಲರೂ ಬಹಳ ಎಚ್ಚರಿಕೆ ಹೆಜ್ಜೆಇಡಬೇಕು.ಮಾದಿಗ ಸಮುದಾಯದಲ್ಲಿ ಹೆಚ್ಚು ಜಾಗೃತಿ ಮೂಡಿಸಬೇಕು.ಜೊತೆಗೆ ಹಟ್ಟಿ, ಕಾಲೋನಿ, ಬಡಾವಣೆಗಳಲ್ಲಿದ್ದು ಜಾತಿಗಣತಿದಾರರು ಆಗಮಿಸಿದ ವೇಳೆ ಅವರೊಂದಿಗೆ ಮನೆ ಮನೆಗೆ ಭೇಟಿ ನೀಡಿ ಸಮುದಾಯದವರು ಮಾದಿಗಎಂದು ಬರೆಯಿಸುವರೀತಿ ಕೆಲಸ ಮಾಡಬೇಕುಎಂದು ತಿಳಿಸಿದರು.

# ಪುಲ್ಲಾರೆಡ್ಡಿ ಪೆಟ್ರೋಲ್ ಬಂಕ್ ಬಳಿ ಆಟೋಕ್ಕೆ ಹಿಂಬದಿಯಿಂದ ಗುದ್ದಿದ ಲಾರಿ: ಆರು ಜನರಿಗೆ ಗಾಯ

**ಚಳ್ಳಕೆರೆ:** ನಗರದ ಬಳ್ಳಾರಿ ರಸ್ತೆಯ ಪುಲ್ಲಾರೆಡ್ಡಿ ಪೆಟ್ರೋಲ್ ಬಂಕ್‌ಬಳಿ ಬಳ್ಳಾರಿ ಕಡೆಯಿಂದ ಚಳ್ಳಕೆರೆ ಕಡೆಗೆ ಬರುತ್ತಿದ್ದ ಲಾರಿ ಆಟೋರಿಕ್ಷಾಕ್ಕೆ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ಆಟೋದಲ್ಲಿ ಪ್ರಯಾಣಿಸುತ್ತಿದ್ದ ಐವರು ಹಾಗೂ ಲಾರಿಯಲ್ಲಿ ಪ್ರಯಾಣಿಸುತ್ತಿದ್ದ ಓರ್ವನಿಗೆ ಗಾಯಗಳಾಗಿ ಸಾರ್ವಜನಿಕ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ಧಾರೆ. ಲಾರಿಯಲ್ಲಿ ಪ್ರಯಾಣಿಸುತ್ತಿದ್ದ ಗಾಯಾಳು ರವಿಕುಮಾರ್ ದೂರು ನೀಡಿ, ಲಾರಿಚಾಲಕ ಓಬಯ್ಯ ತನ್ನ ವಾಹನವನ್ನು ವೇಗವಾಗಿ ನಡೆಸಿಕೊಂಡು ಬಂದು ಆಟೋರಿಕ್ಷಾಕ್ಕೆ ಹಿಂಬದಿಯಿಂದ ಡಿಕ್ಕಿ ಹೊಡೆದ ಪರಿಣಾಮ ಆಟೋಚಾಲಕ ಸೈಯದ್ ನಜೀರ್, ದುರ್ಗಮ್ಮ, ಮಾರಕ್ಕ, ಲಕ್ಷ್ಮೀದೇವಿ, ಉಮೇಶ್, ಕರಿಯಮ್ಮ ಇವರಿಗೆ ಗಾಯಳಾಗಿದ್ದು, ತೀರ್ವವಾಗಿ ಪೆಟ್ಟುಬಿದ್ದ ದುರ್ಗಮ್ಮ ಮತ್ತು ಮಾರಕ್ಕಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಠಾಣಾಧಿಕಾರಿ ಮಂಜಪ್ಪ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ಧಾರೆ.



## 2 ತಾಸಿನಲ್ಲಿ ಬಿ ಖಾತಾ ವಿತರಣೆ ಮೆಚ್ಚಗೆ ವ್ಯಕ್ತ ಪಡಿಸಿದ ಉಪಲೋಕಾಯುಕ್ತ

**ದಾವಣಗೆರೆ :** ದಾವಣಗೆರೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ



ಗುರುವಾರದ ನಡೆದ ಸಾರ್ವಜನಿಕರಿಂದ ಅಹವಾಲು ಮತ್ತು ದೂರು ಸ್ವೀಕಾರ ಕಾರ್ಯಕ್ರಮದಲ್ಲಿ ಪಾಲಿಕೆಯಲ್ಲಿ ಬಿ–ಖಾತಾವನ್ನು 2 ತಾಸಿನಲ್ಲಿ ವಿತರಣೆ ಮಾಡಿದ ಪಾಲಿಕೆ ಅಧಿಕಾರಿಗಳಿಗೆ ಉಪಲೋಕಾಯುಕ್ತ ಬಿ.ವೀರಪ್ಪ ಅವರು ಮೆಚ್ಚಗೆ ವ್ಯಕ್ತ ಪಡಿಸಿ, ಕಾರ್ಯವೈಖರಿಗೆ ಚಪ್ಪಾಳೆ ತಟ್ಟಿದರು. ಬಿ.ಖಾತಾವನ್ನು ಉಪಲೋಕಾಯುಕ್ತ ಬಿ.ವೀರಪ್ಪ ಅವರು ಸಾರ್ವಜನಿಕರಿಗೆ ನೀಡಿದರು. ಈ ವೇಳೆ ಪಾಲಿಕೆ ಆಯುಕ್ತೆ ರೇಣುಕಾ ಹಾಗೂ ವಲಯ ಆಯುಕ್ತರಾದ ನಾಗರತ್ನಮ್ಮ, ಈರಮ್ಮ, ಕಂದಾಯ ಅಧಿಕಾರಿಗಳು ಸಿಬ್ಬಂದಿಗಳು ಇದ್ದರು.

**ಪ್ರಮುಖ ಸುದ್ದಿ**

# ಪದವಿ ಕಾಲೇಜಿಗೆ ಹೊಸ ಕಟ್ಟಡಕ್ಕೆ 2 ಕೋಟಿ ಬಿಡುಗಡೆ

» ಹೊಸದುರ್ಗ

ಪಟ್ಟಣದ ಪದವಿ ಕಾಲೇಜಿನ ಕಟ್ಟಡ ದುಸ್ಥಿತಿಯಲ್ಲಿದ್ದು ಹೊಸ ಕಟ್ಟಡ ನಿರ್ಮಾಣಕ್ಕಾಗಿ ಈಗಾಗಲೆ 2 ಕೋಟಿ ಹಣ ಮಂಜೂರಾಗಿದ್ದು ಟೆಂಡರ್ ಕೂಡ ಮುಗಿದಿದೆ ಇನ್ನು ಸ್ವಲ್ಪ ದಿನಗಳಲ್ಲೆ ನೂತನ ಕಟ್ಟಡದ ಕಾಮಗಾರಿ ಪ್ರಾರಂಭವಾಗಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಪಟ್ಟಣದ ಪದವಿ ಕಾಲೇಜಿನ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ ನಿಧಿಯಡಿಯಲ್ಲಿ ಕೊಡುಗೆಯಾಗಿ ನೀಡಿರುವ ರೂ 16 ಲಕ್ಷ ಮೌಲ್ಯದ ವಿವಿಧ ಪೀಠೋಪಕರಣಗಳನ್ನು ಹಸ್ತಾಂತರಿಸಿ ಮಾತನಾಡಿದರು.





ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷನಾಗಿರುವ ನನಗೆ ಸಿಆರ್‌ಎಸ್ ಪಂಡ್‌ನಲ್ಲಿ 1 ಕೋಟಿ 60 ಲಕ್ಷ ಹಣವಿತ್ತು ಈ ಹಣದಲ್ಲಿ ನಮಗೂ ಫಂಟ್ ನೀಡುವಂತೆ ಅನೇಕ ಮಂತ್ರಿಗಳು ಬೇಡಿಕೆ ಇಟ್ಟಿದ್ದರು ಆದರೆ ನಾನು ನಿಗಮದ ಅಧ್ಯಕ್ಷನಾಗಿದ್ದರಿಂದ ಈ ಹಣವನ್ನ ಯಾರಿಗೂ ನೀಡದೆ ಸಂಪೂರ್ಣ ಹಣವನ್ನ ತಂದು ಶಿಕ್ಷಣ ಕ್ಷೇತ್ರಕ್ಕಾಗಿ ಮೀಸಲಿಟ್ಟಿದ್ದೇನೆ ಈ ಹಣದಲ್ಲಿ ಮುರಾರ್ಜಿ ಶಾಲೆಗಳಿಗೆ, ಸರ್ಕಾರಿ ಶಾಲೆಗಳಿಗೆ ಬೇಕಾಗುವ ಪೀಠೋಪಕರಣ,ಶಿಕ್ಷಣದ ಪ್ರಗತಿಗೆ ಬೇಕಾಗುವ ಪರಿಕರಗಳು,ಕಟ್ಟಡಗಳ ದುರಸ್ಥಿ ಹೀಗೆ ಶಿಕ್ಷಣ ಇಲಾಖೆಗೆ ಉಪಯೋಗವಾಗುವಂತಹ ಕೆಲಸಗಳಿಗೆ ಮೀಸಲಿರಿಸಲಾಗಿದೆ ಅದರಲ್ಲಿ ಇಲ್ಲಿನ ಪದವಿ ಕಾಲೇಜಿಗೆ ರೂ 16 ಲಕ್ಷ ಮೌಲ್ಯದ ವಿವಿಧ ಪೀಠೋಪಕರಣಗಳನ್ನ ನೀಡಲಾಗಿದೆ. ಎಂದ ಅವರು ಇದೇ ಕಾಲೇಜಿಗೆ ಕೆಲವು ತಿಂಗಳುಗಳ ನಂತರ ಮಲ್ಟಿಜಿಮ್ ಸಹಾ ಮಂಜೂರಾತಿಯನ್ನ ಮಾಡಿಸಲಗುವುದು ಎಂಬ ಭರವಸೆಯನ್ನ ನೀಡಿದರು.

ಈ ಹಿಂದೆ ಪದವಿ ಕಾಲೇಜಿನ ಮತ್ತು ಪಾಲಿಟೆಕ್ನಿಕ್ ಕಾಲೇಜಿನ ವಿದ್ಯಾರ್ಥಿಗಳಿಗೆ ಓಡಾಡಲು ವಾಹನ ವ್ಯವಸ್ಥೆ ಇರಲಿಲ್ಲ ಇದೀಗ ನಿಮ್ಮ ಬೇಡಿಕೆಯಂತೆ ನಿಮಗಾಗಿ ನೀವು ಓಡಾಡಲು ಅನುಕೂಲವಾಗುಂತೆ ಗ್ರಾಮೀಣ ಬಸ್ ಬಿಟ್ಟಿದ್ದೇವೆ ಎಂದು ತಿಳಿಸಿದ ಅವರು ವಿದ್ಯಾಥಿಗಳು ಚಂಚಲ ಮನಸ್ಸನ್ನು ಹತೋಟಿಗೆ ತಂದು ಕೊಂಡು ಚೆನ್ನಾಗಿ ವಿದ್ಯಾಭ್ಯಾಸ ಮಾಡಿ ನಿಮ್ಮ ಭವಿಷ್ಯವನ್ನ ರೂಪಿಸಿಕೊಳ್ಳಿ ಎಂದು ಕರೆ ನೀಡಿದರು.

ಪದವಿ ಕಾಲೇಜಿನ ಪ್ರಾಂಶುಪಾಲ ಡಾ:ಅಶ್ವಥ್‌ಯಾದವ್ ಜೆ.ಎಸ್. ಅಧ್ಯಕ್ಷತೆ ವಹಿಸಿದ್ದರು.ಕಾರ್ಯಕ್ರಮದಲ್ಲಿ ಐಕ್ಯೂಎಎಸ್ ಸಂಚಾಲಕ ಸತೀಶ್ ಎಂ.ಈ ಕಾಲೇಜಿನ ಅಭಿವೃದ್ಧಿ ಸಮಿತಿಯ ಸದಸ್ಯರುಗಳಾದ ಅಗ್ರೋ ಹೆಚ್.ಶಿವಣ್ಣ, ನಾಯಿಗೆರೆಚಂದ್ರಶೇಖರ್, ಬ್ರಹ್ಮಪಾಲ್ (ಪಾಪಣ್ಣಿ) ದೀಪಿಕಾಸತೀಶ್, ಸಕ್ಲೇನ್‌ಪಾಷ, ಅಜ್ಜಪ್ಪ, ರಾಜಣ್ಣ, ಉಪನ್ಯಾಸಕ ಮಹಲಿಂಗಪ್ಪ, ಭ್ರಮರಾಂಭ ಸೇರಿದಂತೆ ಬೋಧಕ, ಭೋಧಕೇತರ ಸಿಬ್ಬಂಧಿ, ಹಿರಿಯ, ಹಾಲಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

» ದಾವಣಗೆರೆ

ಜಿಲ್ಲೆಯಲ್ಲಿ ಪ್ರತಿ ತಿಂಗಳು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ. ಕಾರ್ಮಿಕರ ಇಪಿಎ□□ಓ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಏಪ್ರಿಲ್ 28 ರಂದು ನಿಧಿ ಆಪ್ಕೆ ನಿಕಟ್ 2.0, ಶ್ರೀಸಿದ್ದಾರ್ಥ ವಿದ್ಯಾ ಸಂಸ್ಥೆ, 4998, 17ನೇ ಕ್ರಾಸ್, ಆಂಜನೇಯ ಬಡಾವಣೆ ದಾವಣಗೆರೆ ಇಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

### ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನ

» ದಾವಣಗೆರೆ

ಜಗಳೂರು ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಕಾರ್ಯಕ್ರಮದಡಿ ಸಣ್ಣ, ಅತಿಸಣ್ಣ, ಪರಿಶಿಷ್ಟಜಾತಿ, ಹಾಗೂ ಪರಿಶಿಷ್ಟ ಪಂಗಡದ ಅರ್ಹ ರೈತರು ಅರ್ಜಿ ಸಲ್ಲಿಸಬಹುದು. ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ದಾಳಿಂಬೆ, ನಿಂಬೆ ಗೋಂಡಂಬಿ, ಮಲ್ಲಿಗೆ, ವೀಳ್ಯದೆಲೆ, ತೆಂಗು, ಮಾವು, ಸಪೋಟ, ಸೀಬೆ, ಅಂಗಾಂಶಬಾಳೆ, ಪಪ್ಪಾಯ, ಕರಿಬೇವು, ಕಾಳುಮೆಣಸು, ಕೋಕೋ, ನೇರಳೆ, ಸೀತಾಫಲ, ಡ್ರ್ಯಾಗಪ್ರೂಟ್ಸ್, ಇತ್ಯಾದಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಜಗಳೂರು ಕಛೇರಿಗೆ ಅಥವಾ ಆಯಾ ಗ್ರಾಮ ಪಂಚಾಯತಿಗೆ ಸಲ್ಲಿಸಬಹುದು. ಜಾಬ್ ಕಾರ್ಡ್ ರೈತರ ಹೆಸರಿನಲ್ಲಿ ಇರುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿಮಟ್ಟದ ಸಹಾಯಕ ತೋಟಗಾರಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ತಿಳಿಸಿದ್ದಾರೆ.

### ಗೃಹ ರಕ್ಷಕರ ಹುದ್ದೆಗೆ ಅರ್ಜಿ

» ದಾವಣಗೆರೆ

ದಾವಣಗೆರೆ ಜಿಲ್ಲೆಯಾದ್ಯಂತ ವಿವಿಧ ಘಟಕಗಳಲ್ಲಿ ಖಾಲಿ ಇರುವ 110 ಸ್ವಯಂ ಸೇವಕ ಪುರುಷ ಗೃಹ ರಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಸಮಾದೇಷ್ಟರ ಕಚೇರಿ ಘಟಕ ಕಚೇರಿಯಲ್ಲಿ ಹಾಗೂ ತಾಲ್ಲೂಕು/ಉಪ ಘಟಕಗಳಲ್ಲಿಯೂ ಪಡೆದು ಭರ್ತಿ ಮಾಡಿ, ಮೇ.16 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾದೇಷ್ಟರ ಕಚೇರಿ, ದೇವರಾಜ ಬಡಾವಣೆ ಬಿ ಬ್ಲಾಕ್, ಶಿವಪಾರ್ವತಿ ಕಲ್ಯಾಣ ಮಂಟಪ ಪಕ್ಕ, ಶಿವಾಲಯ ಹಿಂಭಾಗ, ದಾವಣಗೆರೆ-577006 ಸಂಪರ್ಕಿಸಲು ಹೋಂ ಗಾರ್ಡ್ಸ್ ಕಮಾಂಡೆಂಟ್ ತಿಳಿಸಿದ್ದಾರೆ.

### ತೆರಿಗೆ ಪಾವತಿಗೆ ಶೇ.5 ರಷ್ಟು ರಿಯಾಯಿತಿ

» ದಾವಣಗೆರೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಸೂಚಿಸಿರುವಂತೆ ಆರ್ಥಿಕ ವರ್ಷದ ಪ್ರಾರಂಭದ ಮೂರು ತಿಂಗಳೊಳಗಾಗಿ ಪ್ರಸಕ್ತ ಸಾಲಿನ ಸಂಪೂರ್ಣ ತೆರಿಗೆಯನ್ನು ಪಾವತಿಸುವವರಿಗೆ ಶೇ.5 ರಷ್ಟು ವಿನಾಯಿತಿ ನೀಡಲಾಗುವುದು. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲಾ ವಿಧದ ಆಸ್ತಿಗಳ ತೆರಿಗೆ ಪಾವತಿಸುವ ಸಾರ್ವಜನಿಕರು ಜೂನ್.30 ರೊಳಗಾಗಿ ತೆರಿಯನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ತೆರಿಗೆ ಪಾವತಿಸಬೇಕೆಂದು ಜಿ.ಪಂ ಮುಖದಯ ಕಾರ್ಯನಿರ್ವಾಹಕಅಧಿಕಾರಿಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಸಚಿವ ಮಧುಬಂಗಾರಪ್ಪ ಆಪ್ತನ ಮೇಲೆ ಹಲ್ಲೆ

» ಶಿವಮೊಗ್ಗ

ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧುಬಂಗಾರಪ್ಪ ಅವರ ಆಪ್ತ ಮತ್ತು ಸೊರಬ ತಾಲೂಕಿನ ಗುಂಜನೂರು ಕಾಂಗ್ರೆಸ್ ಬೂತ್ ಅಧ್ಯಕ್ಷನ ಮೇಲೆ ಹಲ್ಲೆ ಮಾಡಿರುವ ಘಟನೆ ಸೊರಬದಲ್ಲಿ ನಡೆದಿದೆ. ಗುಂಜನೂರು ಕಾಂಗ್ರೆಸ್ ಬೂತ್ ಅಧ್ಯಕ್ಷ ಮಂಜಪ್ಪ ಕರಿಮಪ್ಪ (52) ಹಲ್ಲೆಗೊಳಗಾದವರು. ಸೊರಬ ಪಟ್ಟಣದ ಮುಖ್ಯರಸ್ತೆಯ ನಾಮದೇವಗಲ್ಲಿ ಕ್ರಾಸ್ ಬಳಿ ಬೈಕ್ ನಲ್ಲಿ ಬಂದ ಪ್ರಶಾಂತ್ ಮಹಾದೇವಪ್ಪ ಎನ್ನುವವ ಏಕಾಏಕಿ ಕಾರನ್ನು ಅಡ್ಡ ಗಟ್ಟಿ, ಮಂಜಪ್ಪ ಅವರ ಮೇಲೆ ಹಲ್ಲೆ ಮಾಡಿದ್ದಾನೆ. ರಕ್ತ ಸಿಕ್ತ ಗಾಯಗೊಂಡ ಮಂಜಪ್ಪ ಅವರನ್ನು ಸ್ಥಳೀಯರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ಸಂಬಂಧ ಸೊರಬ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಾಂತಿ ಸಾಗರ ರಕ್ಷಣೆಗೆ ರೈತರೂ ಮುಂದಾಗಬೇಕು: ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ

» ದಾವಣಗೆರೆ

ಶಾಂತಿಸಾಗರ ಅತ್ಯಂತ ಸುಂದರವಾದ ಪ್ರದೇಶವಾಗಿದ್ದು ಈ ಪ್ರದೇಶವನ್ನು ಒತ್ತುವರಿಯಾಗದಂತೆ ನೋಡಿಕೊಂಡು ನೀರು ಮಲಿನವಾಗದಂತೆ ತಡೆಗಟ್ಟಲು ವಿವರ ವರದಿ ನೀಡುವಂತೆ ಪರಿಸರ ಇಲಾಖೆ ಅಧಿಕಾರಿಗೆ ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತ ರಾದ ಬಿ.ವೀರಪ್ಪ ಸೂಚನೆ ನೀಡಿದರು.

ಅವರು ಶಾಂತಿಸಾಗರ ಹಿನ್ನೀರು ಪ್ರದೇಶಕ್ಕೆ ಭೇಟಿ ನೀಡಿ ಕೆರೆ ಒತ್ತುವರಿ ಬಗ್ಗೆ ಪರಿಶೀಲನೆ ನಡೆಸಿದರು.



ಶಾಂತಿ ಸಾಗರ (ಸೂಳೆಕೆರೆ) 5447. 10 ಎಕರೆ ವಿಸ್ತೀರ್ಣ ಹೊಂದಿದ್ದು, ಇದರಲ್ಲಿ 219 ಎಕರೆ 10 ಒತ್ತುವರಿಯಾಗಿದೆ ಎಂದು ಗುರುತಿಸಲಾಗಿದೆ. ಒತ್ತುವರಿಯಾಗ ಜಾಗವನ್ನು ತೆರವು ಮಾಡಲು ಕ್ರಮ ಕೈಗೊಳ್ಳಬೇಕು. ಇಲ್ಲಿಂದ ಅನೇಕ ನಗರ, ಪಟ್ಟಣ ಹಾಗೂ ಅನೇಕ ಗ್ರಾಮಗಳಿಗೆ ಬಹುಗ್ರಾಮ ಯೋಜನೆಯ ಮೂಲಕ ಕುಡಿಯುವ ನೀರನ್ನು ಪೂರೈಕೆ ಮಾಡಲಾಗುತ್ತಿದೆ. ಕೆರೆಯ ಹೂಳೆತ್ತುವುದರಿಂದ ಹೆಚ್ಚಿನ ನೀರನ್ನು ಸಂಗ್ರಹಿಸಲು ಸಾಧ್ಯವಾಗಲಿದೆ. ರೈತರು ತಮ್ಮ ತೋಟ, ಜಮೀನುಗಳಿಗೆ ಮಣ್ಣನ್ನು ತೆಗೆದುಕೊಂಡು ಹೋಗುವುದರಿಂದ ರೈತರಿಗೂ ಲಾಭ ಮತ್ತು ಅಂತರ್ಜಲ ವೃದ್ಧಿಯಾಗಿ ನೀರಿನ ಸಂಗ್ರಹ ಹೆಚ್ಚಲಿದೆ.

ಈ ವೇಳೆ ಸ್ಥಳದಲ್ಲಿದ್ದ ಕೆಲವು ರೈತರು ಮೇಲಿನ ಮೂರು ಅಡಿಯೊಂದಿಗೆ ಇನ್ನೂ ಆಳದವರೆಗೆ ಮಣ್ಣುತೆಗೆಯುತ್ತಾರೆ ಎಂದಾಗ ರೈತರೊಂದಿಗೆ ಸಭೆ ನಡೆಸಿ ಹೂಳೆತ್ತಲು ಮುಂದಾಗಲು ತಿಳಿಸಿ, ರೈತರೂ ಇದಕ್ಕೆ ಸಹಕಾರ ನೀಡಬೇಕೆಂದರು. ಕೋಲಾರದ ಭಾಗದಲ್ಲಿ 1000 ಅಡಿಗಿಂತ ಆಳದವರೆಗೂ ನೀರು ಸಿಗುವುದೇ ಕಷ್ಟವಾಗಿದೆ. ಶಾಂತಿಸಾಗರ ಬಹಳ ಸುಂದರವಾದ ಪ್ರದೇಶವಾಗಿದ್ದು ಇದನ್ನು ಸಂರಕ್ಷಣೆ ಮಾಡುವುದರಿಂದ ಭವಿಷ್ಯಕ್ಕೆ ಅನುಕೂಲ ಮತ್ತು ಪ್ರಾಣಿ, ಪಕ್ಷಿ ಸೇರಿದಂತೆ ಸಕಲ ಜೀವರಾಶಿಗಳಿಗೂ ಅನುಕೂಲವಾಗಲಿದೆ. ಈ ಸಂಪತ್ತನ್ನು ಒಮ್ಮೆ ಕಳೆದುಕೊಂಡರೆ, ಭವಿಷ್ಯದ ಪೀಳಿಗೆ ಸಾಕಷ್ಟು ಸಂಕಷ್ಟಗಳನ್ನು ಎದುರಿಸಬೇಕಾಗುತ್ತದೆ.

ಶಾಂತಿಸಾಗರ ಪ್ರವಾಸಿ ತಾಣ: ಶಾಂತಿ ಸಾಗರವನ್ನು ಪ್ರವಾಸಿ ತಾಣವಾಗಿಸಲು ಸಾಕಷ್ಟು ಅವಕಾಶಗಳಿವೆ. ಕೆರೆ ಸುತ್ತಮುತ್ತಲು ಅರಣ್ಯ ಸಸಿಗಳನ್ನು ಬೆಳೆಸಬೇಕು. ಇಲ್ಲಿ ಹೋಂಸ್ಟೇಗಳಿಗೆ ಅವಕಾಶ ಮಾಡಿಕೊಡಬಾರದು. ಜಲಸಾಹಸ ಕ್ರೀಡೆಗಳಿಗೆ ಇನ್ನೂ ಹೆಚ್ಚಿನ ಆದ್ಯತೆ ನೀಡಿ ನೀರು ಮಲಿನವಾಗದಂತೆ ಪ್ಲಾಸ್ಟಿಕ್ ನೀರಿಗೆ ಹಾಕಿಸಬೇಡಿ ಮತ್ತು ಪ್ರವಾಸಿಗರು ತಂದ ಆಹಾರವನ್ನು ಕೆರೆಗೆ ಹಾಕದಂತೆ ನೋಡಿಕೊಳ್ಳಲು ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆರೆ ಮಾಲಿನ್ಯ ತಡೆಗೆ ಸಮಗ್ರ ವರದಿ ನೀಡಲು ಸೂಚನೆ: ಶಾಂತಿ ಸಾಗರ ವ್ಯಾಪ್ತಿಯಲ್ಲಿ 10 ಪಂಚಾಯಿತಿಗಳು ಬರುತ್ತವೆ. ಇಲ್ಲಿನ ಬಳಕೆ ನೀರನ್ನು ಮತ್ತು ಮಲ, ಮೂತ್ರದ ನೀರು ಶಾಂತಿ ಸಾಗರಕ್ಕೆ ಸೇರದಂತೆ ನೋಡಿಕೊಳ್ಳಬೇಕು. ಈ ಬಗ್ಗೆ ಪರಿಶೀಲಿಸಿ ಸಮಗ್ರವಾದ ವರದಿಯನ್ನು ಪರಿಸರ ಇಲಾಖೆ ಅಧಿಕಾರಿಗಳು ನೀಡಬೇಕು. ಅಧಿಕಾರಿಗಳು ನೀಡಿದ ವರದಿಯನ್ನು ಲೋಕಾಯುಕ್ತ ಅಧಿಕಾರಿಗಳಿಂದ ಪರಿಶೀಲನೆ ನಡೆಸಲಾಗುತ್ತದೆ ಎಂದು ತಿಳಿಸಿದರು.ಲೋಕಾಯುಕ್ತ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ್, ಉಪನಿಬಂಧಕರಾದ ಅರವಿಂದ್ ಎನ್.ವಿ, ಮಿಲನ, ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರಣ್ಣನವರ, ಜಿಲ್ಲಾಧಿಕಾರಿ ಸುರೇಶ್ ಬಿ.ಇಟ್ನಾಳ್, ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಐಎಎಸ್ ಅಧಿಕಾರಿ ಸುಖಪುತ್ರಗೆ ಅಭಿನಂದನೆ

» ಚಳ್ಳಕೆರೆ

ತಾಲ್ಲೂಕಿನ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಂಗಸಂಸ್ಥೆಯಾದ ಸ್ನೇಹ ಬಳಗ ತಮಿಳುನಾಡಿನಲ್ಲಿ ವಿಶೇಷ ಪ್ರವಾಸಕೈಗೊಂಡ ಸಂದರ್ಭದಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೂನುಬೇವು ಗ್ರಾಮದ ಕೆ.ಓ.ಸುಖಪುತ್ರರವರು ಐಎಎಸ್ ಅಧಿಕಾರಿಯಾಗಿ ತಿರುನೆಲ್ವೇಲಿ ಮಹಾನಗರ ಪಾಲಿಕೆ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿರು ಅವರನ್ನು ಅಭಿನಂದಿಸಿದರು.

ಸ್ನೇಹಬಳಗದ ಅಧ್ಯಕ್ಷ ಸಿ.ಟಿ.ವೀರೇಶ್ ಮಾತನಾಡಿ, ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸ್ನೇಹ ಬಳಗ ಪ್ರತಿವರ್ಷ ಪ್ರವಾಸಕೈಗೊಳ್ಳಲಿದೆ. ಸಂಘದ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರು ಪ್ರವಾಸದಲ್ಲಿ ಪಾಲ್ಗೊಳ್ಳುತ್ತಾರೆ. ತಮಿಳುನಾಡಿನ ತಿರುನೆಲ್ವೇಲಿ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ನಮ್ಮ ಕ್ಷೇತ್ರದ ಕೂನುಬೇವು ಗ್ರಾಮದ ಕೆ.ಓ.ಸುಖಪುತ್ರರವರು ಇಲ್ಲಿನ ಮಹಾನಗರ ಪಾಲಿಕೆ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದು ಅವರನ್ನು ಸಂಘದ ಪರವಾಗಿ ಅಭಿನಂದಿಸಿದ್ದೇನೆ. ಸುಖಪುತ್ರರವರ ಐಎಎಸ್ ಅಧಿಕಾರಿಯಾಗಿ ತಮಿಳುನಾಡಿನ ವಿವಿಧ ಜಿಲ್ಲೆಗಳಲ್ಲಿ ತಮ್ಮ ಉತ್ತಮ ಕಾರ್ಯದ ಮೂಲಕ ಖ್ಯಾತರಾಗಿರುವುದು ನಮ್ಮೆಲ್ಲರಿಗೂ ಸಂತಸ ತಂದಿದೆ ಎಂದರು.ಅಭಿನಂದನೆ ಸ್ವೀಕರಿಸಿ ಮಾತನಾಡಿದ ಮಹಾನಗರ ಪಾಲಿಕೆ ಆಯುಕ್ತ ಕೆ.ಓ.ಸುಖಪುತ್ರನಮ್ಮ ಜಿಲ್ಲೆಯ ವಿಶೇಷವಾಗಿ ನಮ್ಮ ವಿಧಾನಸಭಾ ಕ್ಷೇತ್ರದ ಸಮಾಜದ ಬಂಧುಗಳು ಪ್ರವಾಸಕ್ಕೆ ಬಂದ ಸಂದರ್ಭದಲ್ಲಿ ನನ್ನ ಮಾಹಿತಿ ಪಡೆದು ಕಚೇರಿಗೆ ಬಂದು ಅಭಿನಂದಿಸಿದ್ದಾರೆ. ಅವರೆಲ್ಲರ ಪ್ರೀತಿ, ವಿಶ್ವಾಸ, ಶುಭಹಾರೈಕೆ ನನಗೆ ಮುಂದಿನ ದಿನಗಳಲ್ಲಿ ಇನ್ನೂ ಉತ್ತಮ ಕೆಲಸ ಮಾಡಲು ಶಕ್ತಿತುಂಬಿದೆ. ಅಭಿನಂದಿಸಿದ ಸಂಘದ ಎಲ್ಲಾ ಪದಾಧಿಕಾರಿಗಳಿಗೆ ಕೃತಜ್ಞತೆಗಳು ಎಂದರು.ಸಂಘದ ಪದಾಧಿಕಾರಿಗಳಾದ ಕೆ.ಸೂರನಾಯಕ, ಸಿ.ಗುರುಸ್ವಾಮಿ, ಆರ್. ಹನುಮಂತರಾಯ, ಜಿ.ಟಿ.ವೀರಭದ್ರಸ್ವಾಮಿ, ಸಿ.ನಾಗರಾಜು, ಬಿ.ತಿಪ್ಪೇಸ್ವಾಮಿ, ಗೋವಿಂದಪ್ಪ, ಮಹಂತೇಶ್, ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.



## ಬಾಲ್ಯ ವಿವಾಹ ತಡೆ ಕಾಯಿದೆ ತಾಲ್ಲೂಕು ಸಮನ್ವಯ ಸಮಿತಿ ಸಭೆ



» ಚಿತ್ರದುರ್ಗ

ಬಾಲ್ಯ ವಿವಾಹ ಪ್ರಕರಣಗಳು ಎಲ್ಲಿಯಾದರೂ ಕಂಡು ಬಂದಲ್ಲಿ ತಕ್ಷಣವೆ ಎಫ್.ಐ.ಆರ್.ದಾಖಲಿಸುವಂತೆ ತಹಶೀಲ್ದಾರ್ ಗೋವಿಂದರಾಜ್ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಬಾಲ್ಯ ವಿವಾಹ ನಿಷೇದ ತಡೆ ಕಾಯ್ದೆ, ಮಕ್ಕಳು ಮತ್ತು ಮಹಿಳೆಯರ ಸಾಗಾಟ ಹಾಗೂ ಮಾರಾಟ ತಡೆ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ರಕ್ಷಣೆ ಕುರಿತು ತಹಶೀಲ್ದಾರ್ ಗೋವಿಂದರಾಜ್‍ರವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕಚೇರಿಯಲ್ಲಿ ಮೊನ್ನೆ ನಡೆದ ತಾಲ್ಲೂಕು ಸಮನ್ವಯ ಸಮಿತಿ ಸಭೆಯಲ್ಲಿ ಅಕ್ಷಯ ತೃತೀಯ ಬಸವ ಜಯಂತಿಯಂದು ಒಳ್ಳೆಯ ದಿನವಿದೆ ಎಂಬ ನೆಪದಲ್ಲಿ ಪೋಷಕರು ಅಪ್ರಾಪ್ತ ಬಾಲಕಿಯರ ಮದುವೆ ಮಾಡುತ್ತಿರುತ್ತಾರೆ. ಅಂತಹ ಕಡೆ ಹೆಚ್ಚಿನ ನಿಗಾ ವಹಿಸಿ ಬಾಲ್ಯ ವಿವಾಹವನ್ನು ತಡೆಗಟ್ಟುವ ಜವಾಬ್ದಾರಿ ಎಲ್ಲರ ಮೇಲಿದೆ. ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಮಟ್ಟದಲ್ಲಿ ಸಮಿತಿಗಳಿವೆ. ನಿಮ್ಮ ನಿಮ್ಮ ಜವಾಬ್ದಾರಿಯನ್ನು ಚಾಚೂ ತಪ್ಪದೆ ಪಾಲಿಸಿ ಬಾಲ್ಯ ವಿವಾಹಗಳಾಗುವುದನ್ನು ತಡೆಗಟ್ಟಿ ಎಂದು ಹೇಳಿದರು.

ಹೆಣ್ಣಿಗೆ 18 ವರ್ಷ, ಗಂಡಿಗೆ 21 ವರ್ಷಗಳಾಗಿರಬೇಕು. ಆಗ ಮಾತ್ರ ವಿವಾಹ ಮಾಡಿಕೊಳ್ಳಲು ಅರ್ಹರು. ಈ ನಿಯಮವನ್ನು ಉಲ್ಲಂಘಿಸಿ ಮಕ್ಕಳ ವಿವಾಹವಾದರೆ ಪೋಷಕರಿಗೆ ಜೈಲು ಶಿಕ್ಷೆ ಹಾಗೂ ದಂಡ ವಿಧಿಸಲು ಕಾನೂನಿನಡಿಯಲ್ಲಿ ಅವಕಾಶವಿದೆ ಎನ್ನುವುದನ್ನು ಗ್ರಾಮೀಣ ಮಟ್ಟದಲ್ಲಿ ಜನತೆಗೆ ಮನವರಿಕೆ ಮಾಡಿಕೊಟ್ಟಾಗ ಮಾತ್ರ ಬಾಲ್ಯ ವಿವಾಹ ನಿಯಂತ್ರಣಕ್ಕೆ ಬರಲು ಸಾಧ್ಯ ಎಂದರು.ಭರಮಸಾಗರ ಸಿ.ಡಿ.ಪಿ.ಓ. ಸುಧಾ, ಚಿತ್ರದುರ್ಗ ಸಿ.ಡಿ.ಪಿ.ಓ. ವೀಣ, ಕ್ಷೇತ್ರ ಶಿಕ್ಷಣಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ, ನಗರಸಭೆ ಪೌರಾಯುಕ್ತೆ ರೇಣುಕಾಬಸವೇಶ್ವರ ವಿದ್ಯಾಸಂಸ್ಥೆಯ ಕಾರ್ಯದರ್ಶಿ ವಿ.ಕೆ.ಶಂಕರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಶ್ರೀ ದುರ್ಗಾಂಬಿಕಾ ದೇವಿಯ ಬೆಲ್ಲದ ರಾಶಿ ಕಾರ್ಯಕ್ರಮ

ಹೊಸದುರ್ಗ: ಪಟ್ಟಣದ ಗ್ರಾಮದೇವತೆ ಶ್ರೀ ದುರ್ಗಾಂಬಿಕ ದೇವಿಯವರ ಜಾತ್ರಾ ಮಹೋತ್ಸವದ ಅಂಗವಾಗಿ ಶುಕ್ರವಾರ ರಾತ್ರಿ ಬೆಲ್ಲದ ರಾಶಿ ಉತ್ಸವವು ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಸಡಗರ ಸಂಭ್ರಮಗಳಿಂದ ವಿಧಿಪೂರ್ವಕವಾಗಿ ಜರುಗಿತು. ಭಕ್ತರು ಭಕ್ತಿಯಿಂದ ಸಮರ್ಪಿಸಿದ ಒಂಬತ್ತು ಭಾರಿ ಬೆಲ್ಲದ ರಾಶಿಯನ್ನು ದೈವ ಸಂತೃಪ್ತಿಗಾಗಿ ಸಜ್ಜುಗೊಳಿಸಲಾಗಿತ್ತು. ನಡು ರಾತ್ರಿಯೂ ಸಹಾ ಅಬಾಲವೃದ್ಧರು ಯುವಕರು, ಯುವತಿಯರು ಮಕ್ಕಳು ಸೇರಿದಂತೆ ಸರ್ವ ಭಕ್ತರು ಬೆಲ್ಲದ ರಾಶಿ ಉತ್ಸವ ವೀಕ್ಷಿಸಿದರು. ನಂತರ ಶ್ರೀ ಸೋಮದೇವರ ಓಕುಳಿ ವರ್ಣನಾತೀತವಾಗಿ ಐದು ಭಾರಿ ಜರುಗಿತು. ಬೆಲ್ಲದ ರಾಶಿಗಳಿಂದ ಕೈವಾಡದಾದರರಿಗೆ ಮಡಿವಾಳರಿಗೆ, ಸೇವಾಕರ್ತರಿಗೆ, ಬೆಲ್ಲ ಹಂಚಲಾಯಿತು.



**ಪ್ರಮುಖ ಸುದ್ದಿ**

# ಧಾರ್ಮಿಕ ಕ್ಷೇತ್ರದ ಜ್ಞಾನಜ್ಯೋತಿ, ಜಗಜ್ಯೋತಿಬಸವೇಶ್ವರರ ಜಯಂತಿ ಕಾರ್ಯಕ್ರಮ: ಯಶಸ್ವಿಗೊಳಿಸಲು ಮನವಿ

» ಚಳ್ಳಕೆರೆ

ಧಾರ್ಮಿಕ ಪರಿವರ್ತನೆಯ ಹರಿಕಾರ, ಧಾರ್ಮಿಕ ವಿಚಾರಧಾರೆಗಳ ರೂವಾರಿ ಶ್ರೀಬಸವೇಶ್ವರರ ಜಯಂತಿ ಕಾರ್ಯಕ್ರಮವನ್ನು ಏ.29 ಮತ್ತು 30 ಎರಡು ದಿನಗಳ ಕಾಲ ವೀರಶೈವ ಕಲ್ಯಾಣಮಂಟಪದಲ್ಲಿ ಭಕ್ತಿ, ಶ್ರದ್ದೆಯಿಂದ ಆಚರಿಸಲಾಗುವುದು ಎಂದು ವೀರಶೈವ ಸಮಾಜ ಸೇವಾ ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು ತಿಳಿಸಿದ್ದಾರೆ.

ಸಂಘದ ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್ ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕು ವೀರಶೈವ ಲಿಂಗಾಯಿತ ಸಂಘಟನೆಗಳ ಒಕ್ಕೂಟ, ಗ್ರಾಮಾಂತರ ವೀರಶೈವ ಲಿಂಗಾಯಿತ ಸಂಘಗಳ ಒಕ್ಕೂಟ, ವೀರಶೈವ ಮಹಿಳಾ ಸಮಾಜ ಸೇವಾ ಸಂಘ, ನಗರ ವೀರಶೈವ ಸಂಘ, ಲಿಂಗಾಯಿತನೌಕರರ ಸಂಘ, ಯುವಘಟಕ ಮುಂತಾದ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಏ.29ರ ಮಂಗಳವಾರ ಬೆಳಗ್ಗೆ 7.30ಕ್ಕೆ ಸಿ.ಎಸ್.ಚಂದ್ರಶೇಖರವರ ಧ್ವಜಾರೋಹಣದೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ. 8 ಗಂಟೆಗೆ ಬಸವೇಶ್ವರರ ವೃತ್ತದಲ್ಲಿರುವ ಬಸವೇಶ್ವರರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಗುವುದು, 9.30ಕ್ಕೆ ವೀರಶೈವ ಕಲ್ಯಾಣಮಂಟಪದಲ್ಲಿ ಬಸವೇಶ್ವರರ ಭಾವಚಿತ್ರಕ್ಕೆ ಪೂಜೆ ಹಾಗೂ 10.30ಕ್ಕೆ ವೀರಶೈವ ಸಮಾಜದ ಮಹಿಳೆಯರು, ಮಕ್ಕಳಿಗೆ ವಿವಿಧ ಕಾರ್ಯಕ್ರಮ ಹಮ್ಮಿಕೊಂಡಿದೆ.

ಸಂಜೆ 5.30ಕ್ಕೆ ಅನುಭವ ಮಂಟಪದ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಹಮ್ಮಿಕೊಂಡಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಉದ್ಘಾಟಿಸಲಿದ್ದು, ಸಂಸದ ಗೋವಿಂದಕಾರಜೋಳ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮುಖ್ಯಅತಿಥಿಗಳಾಗಿ ಆಗಮಿಸುವರು. ವೀರಶೈವ ಮಹಿಳಾ



ಸಂಘದ ಅಧ್ಯಕ್ಷ ಪದ್ಮನಾಗರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಡಾ.ಪಿ.ಯಶೋಧರಾಜಶೇಖರಪ್ಪ ಉಪನ್ಯಾಸ ನೀಡಲಿದ್ದು, ನಗರಸಭೆ ನೂತನ ಸದಸ್ಯೆ ಶಿಲ್ಪಿಮುರಳೀಧರವರಿಗೆ ಸನ್ಮಾನಿಸಲಾಗುವುದು. ಮಹಿಳಾ ಸಂಘದ ಕಾರ್ಯದರ್ಶಿ ಮಂಜುಳಾ, ಗೌರವಾಧ್ಯಕ್ಷ ಅನಪೂರ್ಣ, ಬಸವೇಶ್ವರವಿದ್ಯಾಸಂಸ್ಥೆ ಅಧ್ಯಕ್ಷ ಪಿ.ಮಂಜುನಾಥ, ವೀರಶೈವ ಲಿಂಗಾಯತ ನೌಕರರ ಸಂಘದ ಅಧ್ಯಕ್ಷ ಸಿ.ಗುರುಸಿದ್ದಮೂರ್ತಿ, ಡಾ.ಕೆ.ಎಂ.ಜಯಕುಮಾರ್, ಶಿವಪುತ್ರಪ್ಪ, ರುದ್ರಮುನಿಯಪ್ಪ, ಡಾ.ಎಲ್.ಎಸ್.ವೀರೇಶ್, ಡಾ.ರಾಜೇಶ್, ಡಾ.ಸಂಜಯಹೊಸಮನೆ, ಡಾ.ಅಭಿಷೇಕ್, ಡಾ.ಅಮೀತ್, ಡಾ.ಪುನಿತ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಏ.30ರ ಬುಧವಾರ 11ಕ್ಕೆ ಧಾರ್ಮಿಕ ವಿಚಾರಮಂಥನ ಕಾರ್ಯಕ್ರಮದಲ್ಲಿ ಕೊಟ್ಟೂರು ಜಗದ್ಗುರು ಶಂಕರಮಹಾಸ್ವಾಮಿ ಮಹಾಸಂಸ್ಥಾನದ ಸೋಮಶಂಕರಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸುವರು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ನಗರಸಭೆ ಅಧ್ಯಕ್ಷೆ ಮಂಜುಳಾ, ವೀರಶೈವ ಮುಖಂಡರಾದ ಟಿ.ಪ್ರಭುದೇವ್, ಎಚ್.ವಿ.ನಾಗರಾಜು, ಎಸ್.ರಾಜಶೇಖರಪ್ಪ, ಕೆ.ಎಂ.ಅರವಿಂದ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ನಾಗರಾಜುಸಿರಿಗೆರೆ ಉಪನ್ಯಾಸ ನೀಡುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೀರಶೈವ ಸಮಾಜಸೇವಾ ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು ವಹಿಸುವರು.

ಎರಡೂ ದಿನಗಳಕಾಲ ನಡೆಯುವ ಬಸವ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಗೌರವಾಧ್ಯಕ್ಷ ಕೆ.ಬಸವರಾಜು, ಉಪಾಧ್ಯಕ್ಷರಾದ ಕೆ.ಎಂ.ಜಗದೀಶ್, ಕೆ.ವಿಜಯೇಂದ್ರ, ಕಾರ್ಯದರ್ಶಿಗಳಾದ ಕೆ.ಈಶ್ವರಪ್ಪ, ಎನ್.ಎಸ್.ಶಂಕರ್, ಖಜಾಂಚಿ ಇಂಧುಶೇಖರ್, ನಿರ್ದೇಶಕರಾದ ಕೆ.ಎಂ.ಕೊಟ್ರೇಶ್, ಮಾತೃಶ್ರೀಮಂಜುನಾಥ, ಕೆ.ಪಿ.ಲೋಕೇಶ್ ಮುಂತಾದವರು ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಪರಿಸರ ಸ್ನೇಹಿ ಜೀವನ ಕ್ರಮ ಅಳವಡಿಸಿಕೊಳ್ಳಲು ಕರೆ

» **ದಾವಣಗೆರೆ**

ಜೀವನದಲ್ಲಿ ಪರಿಸರ ಸ್ನೇಹಿ ಜೀವನ ಕ್ರಮಗಳನ್ನು ಅಳವಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಮಹಾವೀರ ಕರೆಣ್ಣನವರ ತಿಳಿಸಿದರು. ದಾವಣಗೆರೆ ವಿಶ್ವವಿದ್ಯಾಲಯದ ಸಮಾಜ ವಿಜ್ಞಾನ ಸಭಾಂಗಣದಲ್ಲಿ ಮಂಗಳವಾರ(ಏ.22), ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ದಾವಣಗೆರೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ದಾವಣಗೆರೆ, ಪರಿಸರ ವಿಜ್ಞಾನ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ, ರಾಷ್ಟ್ರೀಯ ಸೇವಾ ಯೋಜನೆ, ಘಟಕ-1 ಮತ್ತು 2, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ, ವಿಶ್ವ ಭೂಮಿ ದಿನ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಘನತ್ಯಾಜ್ಯ ವಸ್ತುಗಳ ವಿಂಗಡಣೆ, ಇ-ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ ಹಾಗೂ ಕಟ್ಟಡ ತ್ಯಾಜ್ಯಗಳ ನಿರ್ವಹಣೆಯ ಪ್ರಾಮುಖ್ಯತೆ ಬಗ್ಗೆ ತಿಳಿಸಿದರು. ಘನತ್ಯಾಜ್ಯ ವಸ್ತುಗಳನ್ನು ಮೂಲದಲ್ಲಿಯೇ ವಿಂಗಡಿಸಿ, ಸ್ಥಳೀಯ ಸಂಸ್ಥೆಯವರಿಗೆ ನೀಡುವುದು, ಮರುಬಳಕೆಗೆ ಬರುವ ತ್ಯಾಜ್ಯವಸ್ತುಗಳನ್ನು ಮರುಬಳಕೆ ಮಾಡಿಕೊಳ್ಳಬೇಕು ಎಂದರು. ವಿಶ್ವವಿದ್ಯಾನಿಲಯ ಕೆ.ಎ.ಎಸ್., ಕುಲಸಚಿವರು (ಆಡಳಿತ) ಶಬ್ಬೀರ್ ಬಾಷಾ ಗಂಟಿ, ಇವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ, ಪ್ರಬಂಧ ಮತ್ತು ಚಿತ್ರಕಲಾ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಾದೇಶಿಕ ಹಿರಿಯ ಪರಿಸರ ಅಧಿಕಾರಿ ರಮೇಶ್ ಡಿ. ನಾಯಕ್ ಇವರು ಬಹುಮಾನ ವಿತರಿಸಿದರು. ಹೆಚ್.ಎಂ. ಸಣ್ಣಗೌಡ್ರ, ಮಾಲೀಕರು, ಸಣ್ಣಗೌಡ್ರ ಸೈನ್ಸ್ ಸೆಂಟರ್, ದಾವಣಗೆರೆ ಇವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದರು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದ ಬೋಧಕ ಹಾಗೂ ಬೋಧಕೇತರ ಅಧಿಕಾರಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಹೊಳಲ್ಕೆರೆ ಪಟ್ಟಣದ ದೊಡ್ಡ ಚರಂಡಿ ಸ್ವಚ್ಛತೆ



» **ಹೊಳಲ್ಕೆರೆ**

ಪಟ್ಟಣದಲ್ಲಿನ ದೊಡ್ಡ ಚರಂಡಿಯಲ್ಲಿ ಸಂಗ್ರಹವಾಗಿರುವ ಕಸ ಕಡ್ಡಿ, ಕೊಳಚೆ, ಗೀಡಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಲು ಕ್ರಮ ವಹಿಸಿದೆ ಎಂದು ಪುರಸಭೆಯ ಉಪಾಧ್ಯಕ್ಷೆ ಎ□□□ರ್ ನಾಗರತ್ನ ವೇದಮೂರ್ತಿ ಅಭಿಪ್ರಾಯಪಟ್ಟರು. ಅವರು ಹೊಳಲ್ಕೆರೆ ಪಟ್ಟಣದ ಒಂದನೇ ವಾರ್ಡ್‌ನ ಗಣಪತಿ ದೇವಸ್ಥಾನದ ಹಿಂಬದಿಯ ಚೀರನಹಳ್ಳಿ ರಸ್ತೆಯ ಬೃಹತ್ ಚರಂಡಿ ಸ್ವಚ್ಛತಾ ಕಾರ್ಯ ಪರಿಶೀಲಿಸಿ ಮಾತನಾಡಿದರು.ಪಟ್ಟಣದ ಕೊಳಚೆ ಪ್ರದೇಶದಲ್ಲಿರುವ ಚರಂಡಿಗಳನ್ನು ಸ್ವಚ್ಛಗೊಳಿಸಲಾಗುತ್ತದೆ. ಮಳೆಯ ನೀರನ್ನು ಚರಂಡುಯಲ್ಲಿ ಸರಗವಾಗಿ ಹರಿಯುವಂತೆ ಚರಂಡಿಯಲ್ಲಿನಕೊಳಚೆಯನ್ನತೆಗೆಯಲಾಗುತ್ತದೆ. ಚರಂಡಿಯಲ್ಲಿ ಬೆಳೆದಿರುವ ಮುಳ್ಳಿನ ಗಿಡಗಳು ಮತ್ತಿತರ ಘನ ತ್ಯಾಜ್ಯ ವಸ್ತುಗಳು ಪ್ಲಾಸ್ಟಿಕ್ , ಕೊಳಚೆ, ಮಣ್ಣು ತೆಗೆದು ನೀರು ಸರಾಗವಾಗಿ ಹರಿಯುವ ವ್ಯವಸ್ಥೆ ಕೈಗೊಳ್ಳಲಾಗಿದೆ. ಇದರಿಂದ ತಗ್ಗು ಪ್ರದೇಶದಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ಜನರ ಮನೆ ಒಳಗೆ ನೀರು ನುಗ್ಗದಂತೆ ಎಚ್ಚರ ವಹಿಸಬೇಕೆಂದರು.ಪಟ್ಟಣದ ಮುಷ್ಟಿಗರಹಟ್ಟಿ, ಜವಳಿಬಾವಿ ರಸ್ತೆಯ ದೊಡ್ಡ ಚರಂಡಿಯಲ್ಲಿ ಬೆಳೆದು ನಿಂತಿರುವ ಗಿಡಗಳನ್ನು ಪುರಸಭೆಯಿಂದ ಜೆಸಿಬಿ ಹಾಗೂ ಹಿಟಾಚಿಯಿಂದ ತೆಗೆಯಲಾಗುತ್ತದೆ ಎಂದು ತಿಳಿಸಿದರು. ಪುರಸಭೆಯ ಸಭೆಯ ಆರೋಗ್ಯ ಅಧಿಕಾರಿ ಚೌಕತ್, ಹರೀಶ್, ಕರವೇ ಅಧ್ಯಕ್ಷ ಹನುಮಂತಪ್ಪ ರೈತ ಸಂಘದ ಕಾರ್ಯದರ್ಶಿ ಅಜಯ್ ಕುಮಾರ್,ಚೀರನಹಳ್ಳಿ ರವಿಶಂಕರ್, ಸೇರಿದಂತೆ ಹಲವಾರು ಪೌರಕಾರ್ಮಿಕರು ಉಪಸ್ಥಿರಿದ್ದರು.ಫೋಟೋ ಹೊಳಲ್ಕೆರೆ ಪಟ್ಟಣದ ಗಣಪತಿ ದೇವಸ್ಥಾನದ ಹಿಂಬದಿಯ ಚೀರನಹಳ್ಳಿ ರಸ್ತೆ ಸ್ವಚ್ಛಗೊಳಿಸುತ್ತಿರುವ ಜೆಸಿಬಿ ಪರಿಶೀಲಿಸಿದ ಉಪಾಧ್ಯಕ್ಷೆ ಹ□□□ರ್ ನಾಗರತ್ನ ವೇದಮೂರ್ತಿ ಹಾಗೂ ಆರೋಗ್ಯ ಅಧಿಕಾರಿ ಶೌಕತ್, ಹರೀಶ್ ಇದ್ದರು.

### ಪ್ರವೇಶಕ್ಕಾಗಿ ಅರ್ಜಿ

» **ಚಿತ್ರದುರ್ಗ**

2020-26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ತಿಳಿಸಿದ್ದಾರೆ

# ವಿಶ್ವ ಮಲೇರಿಯಾ ದಿನದ ಅಂಗವಾಗಿ ಜಾಥಾ

» **ದಾವಣಗೆರೆ**

ಜಿಲ್ಲಾ ಚಿಗಟೇರಿ ಆಸ್ಪತ್ರೆಯಲ್ಲಿ ಏಪ್ರಿಲ್ 25 ರಂದು ವಿಶ್ವ ಮಲೇರಿಯ ದಿನದ ಅಂಗವಾಗಿ ಇಲ್ಲಿ ಆಯೋಜಿಸಲಾಗಿದ್ದ ಜಾಥಾವನ್ನು ವಿಭಾಗೀಯ ಸಹ ನಿರ್ದೇಶಕರಾದ ಡಾ॥ ನಂದಾ ಎನ್. ಎಸ್ ಹಾಗೂ ಜಿಲ್ಲಾ ಆರೋಗ್ಯ & ಕು. ಕ ಅಧಿಕಾರಿ ಡಾ॥ ಷಣ್ಮುಖಪ್ಪ.ಎಸ್ ಈ ವರ್ಷ ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರುಹೂಡಿಕೆ ಮಾಡಿ, ಮರು ಕಲ್ಪನೆ ಮಾಡಿ, ಮರು ಉತ್ತೇಜನ ನೀಡೋಣ ಎಂಬ ಘೋಷಣೆಯೊಂದಿಗೆ ಜಾಥಾಕ್ಕೆ ಚಾಲನೆ ನೀಡಿದರು.

2027 ರ ವೇಳೆಗೆ ಮಲೇರಿಯಾ ನಿವಾರಣಾ ಗುರಿ ಸಾಧನೆಯ ಉದ್ದೇಶದಿಂದ ಎಲ್ಲಾ ಹಂತಗಳಲ್ಲಿಯೂ ಕೈಗೊಳ್ಳಲಾಗಿರುವ ಚಟುವಟಿಕೆಗಳ ಪರಿಣಾಮವಾಗಿ ಕಳೆದ 3 ವರ್ಷಗಳಿಂದ ಕರ್ನಾಟಕ ರಾಜ್ಯವು ಮಲೇರಿಯಾ ಮುಕ್ತಗೊಳಿಸುವ ಗುರಿಯನ್ನು ಸಾಧಿಸಬೇಕಾಗಿರುವುದರಿಂದ, ಎಲ್ಲ ಹಂತಗಳಲ್ಲೂ ಮಲೇರಿಯಾ ನಿವಾರಣಾ ಹಂತದಲ್ಲಿದ್ದು ಪ್ರಸ್ತುತ ಸಾಧನೆಯನ್ನು ಉಳಿಸಿಕೊಳ್ಳುವುದು ಮಹತ್ವದಾಗಿದೆ. ಅದರಂತೆ 2027 ರ ವೇಳೆಗೆ ಶೂನ್ಯ ಸ್ಥಳೀಯ ಮಲೇರಿಯಾವನ್ನು ಖಚಿತಪಡಿಸಿಕೊಂಡು ಶೂನ್ಯ ಮಲೇರಿಯಾ ವರ್ಗೀಕರಣವನ್ನು ಸಾಧಿಸಿ




ಕೊನೆಯ ಮೈಲಿಗಲ್ಲನ್ನು ತಲುಪುವುದು ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯು ರಕ್ತ ಪರೀಕ್ಷೆ, ಜ್ವರ ಸಮೀಕ್ಷೆ, ಡಿ.ಡಿ.ಟಿ ಸಿಂಪರಣಾ ಕಾರ್ಯ, ಸಮಸ್ಯಾತ್ಮಾಕ ಪ್ರದೇಶಗಳಿಗೆ ಸೊಳ್ಳೆ ಪರದೆ ವಿತರಣೆ, ವಲಸೆ ಜನರ ಜ್ವರ ಸಮೀಕ್ಷೆ, ಸೊಳ್ಳೆ ನಿಯಂತ್ರಣಕ್ಕಾಗಿ ಲಾರ್ವಾಹಾರಿ ಮೀನುಗಳ ಬಿಡುಗಡೆ, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಲಾರ್ವಾಹಾರಿ ಮೀನುಗಳ ಸಾಕಾಣಿಕ ಕೇಂದ್ರಗಳ ಅಭಿವೃದ್ಧಿ, ಕರಪತ್ರ, ಭಿತ್ತಿ ಪತ್ರ, ಮೈಕಿಂಗ್,ಸ್ಕ್ರೋಲಿಂಗ್ ಮೂಲಕ ಆರೋಗ್ಯ ಶಿಕ್ಷಣ ಮುಂತಾದ ಸಮರೋಪಾದಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಜಿಲ್ಲೆಯನ್ನು ಮಲೇರಿಯಾ ಮುಕ್ತ ಜಿಲ್ಲೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯು ಶ್ರಮ ವಹಿಸುತ್ತಿದೆ ಎಂದರು. ಮಲೇರಿಯಾ ರೋಗವು ಸೊಳ್ಳೆಗಳಿಂದ ಹರಡುವ ಒಂದು ಪ್ರಮುಖ ಸಾಂಕ್ರಾಮಿಕ ರೋಗ. ಸೋಂಕಿತ ಅನಾಫಿಲಿಸ್ ಜಾತಿಗೆ ಸೇರಿದ ಹೆಣ್ಣು ಸೊಳ್ಳೆಗಳು ಪ್ಲಾಸ್ಮೋಡಿಯ ರೋಗಾಣು ಹರಡಿಸುವುದರಿಂದ ಬರುವ ಖಾಯಿಲೆಮಲೇರಿಯ, ಈ ರೋಗದ ಲಕ್ಷಣಗಳು, ದಿನ ಬಿಟ್ಟು ದಿನ ಚಳಿ, ನಡುಕ, ತಲೆನೋವು, ಜ್ವರ, ವಾಕರಿಕೆ, ಬಾಯಾರಿಕೆ, ಬೆವರುವುದು, ಸುಸ್ತು ಲಕ್ಷಣಗಳಾಗಿವೆ. ಮಲೇರಿಯಾ ಪತ್ತೆ ಹಚ್ಚುವ ವಿಧಾನ: ಮನೆ ಮನೆ ಭೇಟಿ ನೀಡಿ ಜ್ವರ ಪ್ರಕರಣಗಳಿಂದ ರಕ್ತಲೇಪನ ಸಂಗ್ರಹಿಸಿ ಪರೀಕ್ಷಿಸುವುದು. ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಬರುವ ಜ್ವರ ಪ್ರಕರಣಗಳಿಂದ ರಕ್ತಲೇಪನ ಸಂಗ್ರಹಿಸಿ ಪರೀಕ್ಷಿಸುವುದು. ವಿಶೇಷ ಸಮೀಕ್ಷೆ □ ವಲಸೆ ಜನರ ಕಣ್ಗಾವಲು- ಹೊರ ರಾಜ್ಯಗಳಿಂದ ಬರುವ ಜನರ ರಕ್ತಲೇಪನ ಸಂಗ್ರಹಿಸಿ ಪರೀಕ್ಷಿಸುವುದು.

ಮಲೇರಿಯ ನಿಯಂತ್ರಣಕ್ಕಾಗಿ ಜಿಲ್ಲೆಯಲ್ಲಿ ಕೈಗೊಳ್ಳುತ್ತಿರುವ ನಿಯಂತ್ರಣ ಕ್ರಮಗಳು: ಶೀಘ್ರ ಪತ್ತೆ ಸಂಪೂರ್ಣ ಚಿಕಿತ್ಸೆ , 24 ಘಂಟೆಗಳಲ್ಲಿ ರಕ್ತ ಲೇಪನಗಳ ಪರೀಕ್ಷೆ & ಚಿಕಿತ್ಸೆ, ಎಲ್ಲ ಹಂತಗಳಲ್ಲಿ ವಲಸಿಗರ ಕಣ್ಗಾವಲು ನಡೆಸಲಾಗುತ್ತಿದೆ. ವಿವಿಧ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸುವುದು, ಮಲೇರಿಯ ಪತ್ತೆಯಾದಗ್ರಾಮ, ಪ್ರದೇಶಗಳಲ್ಲಿ ಸಂಪರ್ಕ, ಸಮೂಹ ರಕ್ತಲೇಪನ ಸಂಗ್ರಹ & ಐ.ಇ.ಸಿ. ಚಟುವಟಿಕೆಗಳು, ಎಸ್.ಪಿ ಕೀಟನಾಶಕ ಸಿಂಪರಣಾ ಕಾರ್ಯಕ್ರಮ, ಜೈವಿಕ ನಿಯಂತ್ರಣ ವಿಧಾನವಾದ ಲಾರ್ವಾಹಾರಿ ಮೀನುಗಳನ್ನು ಕೆರೆ,ಹೊಂಡ, ಬಾವಿ, ದೊಡ್ಡ ನೀರಿನ ತೊಟ್ಟಿಗಳಲ್ಲಿ ಬಿಡುಗಡೆಗೊಳಿಸುವ ಚಟುವಟಿಕೆನಿರಂತರವಾಗಿನಡೆಸಲಾಗುತ್ತಿದೆ ಎಂದರು.

ಜಿಲ್ಲಾಸ್ಪತ್ರೆಯ ವೈದ್ಯಕೀಯ ಅಧೀಕ್ಷಕರು, ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ಹಾಗೂ ಸಿಬ್ಬಂದಿ, ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿ, ತಾಲ್ಲೂಕು ಆರೋಗ್ಯಾಧಿಕಾರಿಗಳು ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು ಹಾಗೂ ನಗರ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಘೋಷಣೆಗಳನ್ನು ಕೂಗುವ ಮೂಲಕ ಜಾಥಾದಲ್ಲಿ ಭಾಗವಹಿಸಿದ್ದರು.

### ಉಪಲೋಕಾಯುಕ್ತ ನಾಯಮೂರ್ತಿ ಬಿ.ವೀರಪ್ಪ ಮಾಹಿತಿ

# 22 ಸ್ಥಳಗಳಿಗೆ ಭೇಟಿ:13 ಸ್ವಯಂ ಪ್ರೇರಿತ ದೂರು

» **ದಾವಣಗೆರೆ**

ಕರ್ನಾಟಕ ಲೋಕಾಯುಕ್ತದಿಂದ ಏ.22 ರಿಂದ 25ನೇ ತಾರಿಖಿನವರೆಗೆ ದಾವಣಗೆರೆ ಜಿಲ್ಲೆಯ 22 ಸರ್ಕಾರಿ ಕಚೇರಿ ಹಾಗೂ ಸ್ಥಳಗಳಿಗೆ ಭೇಟಿ ನೀಡಿದ್ದು, ಒಟ್ಟು 13 ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿಕೊಳ್ಳಲಾಗಿದೆ ಎಂದು ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿಯ ಎಸ್. ಎಸ್.ಮಲ್ಲಿಕಾರ್ಜುನ ಸಭಾಂಗಣದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆ, ಸಮಾಜ ಕಲ್ಯಾಣ, ಜಿಲ್ಲಾಸ್ಪತ್ರೆ, ಔಷಧ ಉಗ್ರಾಣ, ಮಹಾನಗರ ಪಾಲಿಕೆ, ತಾಲ್ಲೂಕು ಕಚೇರಿ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂವಿಜ್ಞಾನ, ಪ್ರಾದೇಶಿಕ ಸಾರಿಗೆ ಕಚೇರಿ, ಹಿರೆತೊಗಲೂರು ಕಲ್ಲು ಕ್ವಾರಿ, ಶಿವಗಂಗಾ ಸ್ಟೋನ್ ಕ್ರಷರ್ ಹಾಗೂ ಶಾಂತಿಸಾಗರ(ಸೂಳೆಕೆರೆ) ನಿರ್ವಹಣೆ ಕುರಿತು ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿದ್ದು, ಲೋಕಾಯುಕ್ತ ಪೊಲೀಸರಿಂದ ವರದಿ ಪಡೆದು ವಿಚಾರಣೆ ಆರಂಭಿಸಲಾಗುವುದು. ಒಟ್ಟು 510 ದೂರುಗಳು ಸಾರ್ವಜನಿಕರಿಂದ ಸ್ವೀಕೃತವಾಗಿವೆ. ಇವುಗಳಲ್ಲಿ ಹೊಸ ದೂರುಗಳ ಪೈಕಿ 77 ಹಾಗೂ ಹಳೆ ಪ್ರಕರಣಗಳ ಪೈಕಿ 25 ಸೇರಿ 102 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ. ಲೋಕಾಯುಕ್ತ ಸ್ವಾಯತ್ತ ಸಂಸ್ಥೆಯಾಗಿದ್ದು, ಸಂಸ್ಥೆಯನ್ನು ಇನ್ನಷ್ಟು ಬಲಪಡಿಸಲು ಕ್ರಮವಹಿಸಲಾಗಿದೆ. ಸರ್ಕಾರಿ ಅಧಿಕಾರಿಗಳ ಭ್ರಷ್ಟಾಚಾರವನ್ನು ಎಂದಿಗೂ ಲೋಕಾಯುಕ್ತ ಸಹಿಸುವುದಿಲ್ಲ. ಸದ್ಯ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಆದ್ಯತೆ ವಹಿಸಲಾಗಿದೆ ಎಂದು ನ್ಯಾ.ಬಿ.ವೀರಪ್ಪ ಹೇಳಿದರು.

ಲೋಕಾಯುಕ್ತ ಸಂಸ್ಥೆಯ ಕಾರ್ಯಕ್ಷಮತೆ ಬಗ್ಗೆ ಜನರಲ್ಲಿ ವಿಶ್ವಾಸ ಮೂಡಿದ್ದು, ರಾಜ್ಯದಲ್ಲಿ




ಒಟ್ಟು ಸುಮಾರು 23 ಸಾವಿರ ಪ್ರಕರಣಗಳು ದಾಖಲಾಗಿವೆ. ಇವುಗಳಲ್ಲಿ ಶೇ.30 ರಷ್ಟು ಪ್ರಕರಣಗಳಲ್ಲಿ ಅಧಿಕಾರಿಗಳ ಮೇಲೆ ಸುಳ್ಳು ಆರೋಪ ಮಾಡಿರುವ ಸಂಭವಿದೆ. ಜಿಲ್ಲೆಗೆ ಸಂಬಂಧಿಸಿದಂತೆ 114 ದೂರುಗಳು ವಿಚಾರಣ ಬಾಕಿ ಇದ್ದವು. ಇವುಗಳ ವಿಚಾರಣೆಯನ್ನು ಶುಕ್ರವಾರ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ನಡೆಸಲಾಗಿದೆ. ಈ ಪೈಕಿ 25 ಪ್ರಕರಣಗಳು ಇತ್ಯರ್ಥಗೊಂಡಿವೆ. ಲೋಕಾಯುಕ್ತ ಸಂಸ್ಥೆಯ ಬಗ್ಗೆ ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿರುವುದರಿಂದಾಗಿ ನಾನು ಭೇಟಿ ನೀಡಿದ ಉಳಿದ 9 ಜಿಲ್ಲೆಗಳಿಗಿಂತಲೂ ದಾವಣಗೆರೆಯಲ್ಲಿ ಭರಪೂರವಾಗಿ ದೂರುಗಳು ಸ್ವೀಕರವಾಗಿವೆ ನ್ಯಾ.ಬಿ.ವೀರಪ್ಪ ತಿಳಿಸಿದರು.

ಕಂದಾಯ ಇಲಾಖೆ ಹಾಗೂ ಸರ್ವೇ ವಿಷಯವಾಗಿ ಹೆಚ್ಚು ದೂರುಗಳು ದಾಖಲಾಗಿವೆ. ಇವುಗಳ ಜೊತೆ ಇ-ಸ್ವತ್ತು ನೀಡದಿರುವುದು. ನಗರಗಳಲ್ಲಿ ಅಕ್ರಮ ಒತ್ತುವರಿ ಸೇರಿದಂತೆ ಎಲ್ಲಾ ಇಲಾಖೆಗಳ ಅಧಿಕಾರಿಗಳ ವಿರುದ್ದ ಸಾರ್ವಜನಿಕರು ದೂರು ನೀಡಿದ್ದಾರೆ. ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿಯ ಮೇಲೆ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದ್ದು, ನೊಂದಣಿ ಅವಧಿ ಮುಗಿದ ಶಾಲಾ ವಾಹನಗಳ ವಿವರವನ್ನು ಪಡೆದುಕೊಳ್ಳವುದಾಗಿ ಮಾಧ್ಯಮದವರ ಪ್ರಶ್ನೆಗೆ ನ್ಯಾ.ಬಿ.ವೀರಪ್ಪ ಉತ್ತರಿಸಿದರು.

ಸರ್ಕಾರಿ ಶಾಲೆಗಳ ಸ್ಥಿತಗತಿ ಕುರಿತು ಸಂಯುಕ್ತ ಕರ್ನಾಟಕ ದಿನಪತ್ರಿಕೆ 25-07-2023 ಹಾಗೂ 26-09-2023 ವರದಿಗಳನ್ನು ಆಧರಿಸಿ ಲೋಕಾಯಕ್ತ ಸಂಸ್ಥೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿತ್ತು.

ಸಾಸ್ವೆಹಳ್ಳಿ ಹಾಗೂ ಹೊಳೆಮಾದಾಪುರ ಗ್ರಾಮದ ಶಾಲೆಗಳ ಅಭಿವೃದ್ಧಿ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ. ಈ ಹಿನ್ನಲೆಯಲ್ಲಿ ಈ ದೂರುಗಳನ್ನು ಮುಕ್ತಾಯಗೊಳಿಸಲಾಗಿದೆ. ಸಾಮಾಜಿಕ ಕಳಕಳಿಯೊಂದಿಗೆ ವರದಿ ಮಾಡಿದ ಪತ್ರಿಕೆಗೆ ನ್ಯಾ.ಬಿ.ವೀರಪ್ಪ ಅಭಿನಂದಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ್, ಅರವಿಂದ.ಎನ್.ವಿ., ಮಿಲನ.ವಿಎನ್., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಪೂರೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

### 6 ತಿಂಗಳಿಗೊಮ್ಮೆ ನಿಮ್ಮ ರಾಸುಗಳಿಗೆ ರೋಗ ನಿರೋಧಕ ಲಸಿಕೆ ಹಾಕಿಸಿ-ಗೋವಿಂದಪ್ಪ




» **ಹೊಸದುರ್ಗ**

ರಾಸುಗಳಿಗೆ ಯಾವುದೇ ರೋಗಗಳು ಬರಬಾರದೆಂದರೆ ರಾಸುಗಳ ಮಾಲೀಕರು ಪ್ರತಿ ಅರು ತಿಂಗಳಿಗೊಮ್ಮೆ ಲಸಿಕೆ ಹಾಕಿಸಿ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕರೆ ನೀಡಿದರು.ತಾಲೂಕಿನ ಬೆಲಗೂರು ಗ್ರಾಮದಲ್ಲಿ ಪಶು ಇಲಾಖೆ ವತಿಯಿಂದ ಶನಿವಾರ ಆಯೋಜಿಸಲಾಗಿದ್ದ 7 ನೇ ಸುತ್ತಿನ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮ ಹಾಗೂ ಕಾಲುಬಾಯಿ ರೋಗ ಮುಕ್ತ (ಲಸಿಕೆ ಹಾಕುವ ಕಾರ್ಯಕ್ರಮ) ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 7 ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮವನ್ನು ಸರ್ಕಾರದಿಂದ ಆಯೋಜಿಸಲಾಗಿದ್ದು ಈ ಕಾರ್ಯಕ್ರಮದಡಿಯಲ್ಲಿ ಪ್ರತಿ ವರ್ಷ ಆರು ತಿಂಗಳಿಗೊಮ್ಮೆ ರಾಸುಗಳಿಗೆ ರೋಗ ನಿರೋಧಕ ಚುಚ್ಚು ಮದ್ದಾದ ಲಸಿಕೆ ಚಿಕಿತ್ಸೆ ನೀಡಲಾಗುತ್ತದೆ, ಈ ಕಾರ್ಯಕ್ರಮವನ್ನ ರಾಜ್ಯಾದ್ಯಂತ ನಡೆಸಲಾಗುತ್ತಿದ್ದು ಇದೇ ಎಪ್ರಿಲ್ 26 ರಿಂದ ಬರುವ ಜೂನ್ 9 ರವರೆಗೆ ಲಸಿಕೆ ಕಾರ್ಯಕ್ರಮ ನಡೆಯಲಿದ್ದು ಸಾರ್ವಜನಿಕರು ರೈತರು ಇದರ ಸದುಪಯೋಗವನ್ನ ಪಡಿಸಿಕೊಳ್ಳಿ ಎಂದು ಕರೆ ನೀಡಿದ ಅವರು ಹೊಸದುರ್ಗ ತಾಲೂಕಿನ 55 ಸಾವಿರ ರಾಸುಗಳಿಗೆ (ಧನ,ಎಮ್ಮೆ,ಹಂದಿ) ಲಸಿಕೆ ಹಾಕಲಾಗುತ್ತಿದೆ ಜೊತೆಗೆ ಈ ವರ್ಷದ ಕಾರ್ಯಕ್ರಮದಲ್ಲಿ ರಾಸುಗಳಿಗೆ ಚರ್ಮಗಂಟು ಇರುವ ರಾಸುಗಳಿಗೂ ಸಹಾ ವೈದ್ಯರು ಲಸಿಕೆಯನ್ನ ಹಾಕಲಿದ್ದಾರೆ, ಆದ್ದರಿಂದ ರಾಸು ಮಾಲಿಕರು ರೈತರು ತಪ್ಪದೆ ಲಸಿಕೆಗಳನ್ನ ಹಾಕಿಸಿಕೊಂಡು ರಾಸುಗಳ ಜೀವ ಉಳಿಸಿ ಎಂದು ಮನವಿ ಮಾಡಿದರು.

**ಪ್ರಮುಖ ಸುದ್ದಿ**


# ಶಿಕ್ಷಣ ಅರ್ಧಕ್ಕೆ ನಿಲ್ಲಿಸಿದರೆ ಅಂಬೇಡ್ಕರ್‌ಗೆ ಅಪಮಾನ ಮಾಡಿದಂತೆ

» **ದಾವಣಗೆರೆ**

ನೀವು ಶಿಕ್ಷಣ ಅರ್ಧಕ್ಕೆ ನಿಲ್ಲಿಸಿದರೆ ದಾದಾ ಸಾಹೇಬ್ ಡಾ. ಬಿ. ಆರ್. ಅಂಬೇಡ್ಕರ್ ಅವರಿಗೆ ಎಸಗುವ ದ್ರೋಹ ಹಾಗೂ ಅಪಮಾನ ಎಂದು ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷರೂ ಆದ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಹೇಳಿದರು.

ಮಾಯಕೊಂಡ ಪಟ್ಟಣದ ಎ. ಕೆ. ಕಾಲೋನಿಯಲ್ಲಿ ಆಯೋಜಿಸಿದ್ದ ಡಾ. ಬಿ. ಆರ್. ಅಂಬೇಡ್ಕರ್ ಮತ್ತು ಬಾಬು ಜಗಜೀವನ್ ರಾಂರವರ ಜಯಂತ್ಯೋತ್ಸವ ಹಾಗೂ ಡಿಎಸ್ ಎಸ್ ಗ್ರಾಮ ಶಾಖೆಯ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಡಾ. ಬಿ. ಆರ್. ಅಂಬೇಡ್ಕರ್ ಅವರು ಉತ್ತಮ ಶಿಕ್ಷಣ ಪಡೆದರೆ ಎಲ್ಲವನ್ನೂ ಸಾಧಿಸಬಹುದು ಎಂದು ಹೇಳಿದ್ದರು. ಅವರ ಬಳಿ ಲೆಕ್ಕವಿಲ್ಲದಷ್ಟು ಪುಸ್ತಕ ಇತ್ತು. ಜ್ಞಾನ ಸಂಪಾದನೆಯಿಂದ ಅಂಬೇಡ್ಕರ್ ಅವರು ವಿಶ್ವವೇ ತಿರುಗಿ ನೋಡುವಂತ ಸಾಧನೆ ಮಾಡಿದರು ಎಂದು ಬಣ್ಣಿಸಿದರು.

ಅಂಬೇಡ್ಕರ್ ಜಯಂತಿ ಮಾಡುವ ಉದ್ದೇಶ ಕೇವಲ ಭಾಷಣ ಮಾಡುವುದಲ್ಲ. ಕನಿಷ್ಠ ಎಂದರೂ ಪದವಿ ಪಡೆದು ದಾವಣಗೆರೆ ವಿವಿಯಲ್ಲಿ ಸ್ನಾತಕೋತ್ತರ



ಪದವಿ ಪಡೆಯಿರಿ. ನಿಮ್ಮ ಮಕ್ಕಳು ಐಎಎಸ್, ಕೆಎಎಸ್ ಮಾಡುತ್ತಾರೆ ಎಂದರೆ ನಮ್ಮ ಬಳಿಗೆ ಕಳುಹಿಸಿ. ನಮ್ಮ ಕೈಯಲ್ಲಾದಷ್ಟು ಸಹಾಯ ಮಾಡುತ್ತೇವೆ ಎಂದು ಹೇಳಿದರು.

ಮಕ್ಕಳಿಗೆ ಪುಸ್ತಕ ಓದುವ ಹವ್ಯಾಸ ಬೆಳೆಸಿ. ಕನಿಷ್ಠ ಎಂದರೂ 20ರಿಂದ 30 ಪುಸ್ತಕಗಳನ್ನು ಕೊಡಿ. ಓದಲು ಹೇಳಿ. ಮನೆ, ವಾಹನ, ಹೊಲ, ಕೆಲಸ ಇಲ್ಲವೆಂದರೂ ಪರವಾಗಿಲ್ಲ ದೊಡ್ಡ ಕನಸು ಕಾಣಬೇಕು. ಮುಂದೊಂದು ದಿನ ಎಂಪಿ, ಶಾಸಕ, ಸಚಿವರಾಗುತ್ತೇಂಬ ಕನಸು ಕಂಡರೆ ಜೀವನದಲ್ಲಿ ಏನನ್ನಾದರೂ ಸಾಧಿಸಿಯೇ ಸಾಧಿಸುತ್ತೀರಿ. ಶಿಕ್ಷಣ ಮತ್ತು ಜ್ಞಾನದಿಂದ ಮಾತ್ರ ಜೀವನದಲ್ಲಿ ಅಂದುಕೊಂಡ ಗುರಿ ಸಾಧಿಸಬಹುದು. ಇದು ಡಿಜಿಟಲ್ ಯುಗ. ಎಲ್ಲವೂ ಕೈಬೆರಳಲ್ಲೇ ಸಿಗುತ್ತದೆ. ಸತತ ಪರಿಶ್ರಮ, ಕಠಿಣ ಅಭ್ಯಾಸದಿಂದ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಾಯಕೊಂಡ ಆಸ್ಪತ್ರೆಯಲ್ಲಿ ಕಳೆದ ಆರು ತಿಂಗಳಿನಿಂದ ವೈದ್ಯರೇ ಇಲ್ಲವಂತೆ. ವಿದ್ಯುತ್ ಹೋಗುವುದು ಸಾಮಾನ್ಯವಾಗಿಬಿಟ್ಟಿದೆ. ನಾವು ಯಾವ ಶತಮಾನದಲ್ಲಿ ಬದುಕುತ್ತಿದ್ದೇವೆ ಎಂಬ ಪ್ರಶ್ನೆ ಎದ್ದಿದೆ. 24 ಗಂಟೆ ವಿದ್ಯುತ್ ಜನರಿಗೆ ಕೊಡಿಸುವ ಹಾಗೂ ವೈದ್ಯರನ್ನು ಕರೆತರುವ ಶಕ್ತಿ ನಮ್ಮಲ್ಲಿ ಇಲ್ಲದಂತಾಗಿದೆ. ಇದು ಬೇಸರದ ಸಂಗತಿ ಎಂದು ಹೇಳಿದರು.

ಶಾಸಕರು ಏನು ಮಾಡಲು ಆಗುತ್ತದೆ ಎಂದು ಜನರು ಹೇಳುತ್ತಾರೆ. ನಾವು ಅಸಹಾಯಕವಾಗಿ ಬದುಕುವಂಥ ಸ್ಥಿತಿಯಲ್ಲಿದ್ದೇವೆ. ನೀವು ಆರಿಸಿ ಕಳುಹಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಇದ್ದಾರೆ. ಎಲ್ಲಾ ಬೇಡಿಕೆ ಈಡೇರಿಸುತ್ತೇವೆ, ನಿಮ್ಮ ಸಮಸ್ಯೆ ಪರಿಹರಿಸುತ್ತೇವೆ ಎಂದು ಹೇಳಿದ್ದರು. ಆದ್ರೆ. ನಿಮ್ಮ ಸಮಸ್ಯೆಗಳು ಪರಿಹಾರ ಆಗಿವೆಯಾ? ಒಮ್ಮೆಯಾದರೂ ಇಲ್ಲಿಗೆ ಬಂದು ನಿಮ್ಮ ಸಂಕಷ್ಟ ಕೇಳಿದ್ದಾರಾ ಎಂದು ಪ್ರಶ್ನಿಸಿದರು.

ಕಾರ್ಯಕ್ರಮದಲ್ಲಿ ರೈತ ಹೋರಾಟಗಾರರಾದ ಪ್ರತಾಪ್ ಗೌಡ್ರು, ಅಶೋಕ್, ಹಿಂಡಸಗಟ್ಟೆ ಹನುಮಂತಪ್ಪ, ಟಿ. ರವಿಕುಮಾರ್, ಮಧುಕುಮಾರ್, ಕಲ್ಲೇಶ್, ರಾಘವೇಂದ್ರ ಮತ್ತಿತರರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಗ್ರಾಮೀಣ ಭಾಗದ ಗರ್ಭಿಣಿ ಮಹಿಳೆಯರಿಗೆ ಆಸರೆಯಾದ ತಳುಕಿನ ತಿಮ್ಮಕ್ಕಳಿಗೆ ಅಭಿನಂದನೆ




» ಚಳ್ಳಕೆರೆ

ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಶತಾಯುಷಿ ತಳುಕಿನ ತಿಮ್ಮಕ್ಕ(103) ಗ್ರಾಮೀಣ ಭಾಗದ ಗರ್ಭಿಣಿ ಮಹಿಳೆಯರಿಗೆ ನೂರಾರು ಹೆರಿಗೆ ಮಾಡಿಸುವ ಮೂಲಕ ಆ ಭಾಗದ ಜನಪ್ರಿಯತೆ ಗಳಿಸಿದ್ದು, ಕಳೆದ ಸುಮಾರು 50 ವರ್ಷಗಳಿಂದ ಪ್ರಸೂತಿ ಕಾರ್ಯವನ್ನು ನೆರವೇರಿಸಿಕೊಂಡು ಬಂದಿದ್ದಾರೆ. ವಿಷಾದದ ಸಂಗತಿ ಎಂದರೆ ಶತಾಯುಷಿ ತಳುಕಿನ ತಿಮ್ಮಕ್ಕಗೆ ಇದುವರೆಗೂ ಯಾವುದೇ ನೆಲೆ ಇಲ್ಲ, ಗ್ರಾಮದಲ್ಲಿ ಚಿಕ್ಕಗುಡಿಸಲು ಹಾಕಿಕೊಂಡು ತನ್ನ ಮೊಮ್ಮಗಳ ಜೊತೆಗೆ ಜೀವನ ಸಾಗಿಸುತ್ತಿದ್ದು, ಇವರಿಗೆ ಯಾವುದೇ ಆದಾಯವಿಲ್ಲ, ಸರ್ಕಾರದಿಂದ ಬರುವ ಭಾಗ್ಯಲಕ್ಷ್ಮಿ ಹಾಗೂ ವೃದ್ದಾಪ್ಯ ವೇತನವೇ ಇವರಿಗೆ ಆಧಾರವಾಗಿದೆ. ಗ್ರಾಮದಲ್ಲಿ ಕಳೆದ 50 ವರ್ಷಗಳಿಂದ ಹೆರಿಗೆ ಮಾಡಿಸುವ ಮೂಲಕ ಸಾವಿರಾರು ಗರ್ಭಿಣಿ ಮಹಿಳೆಯರು ಆಶಾಕಿರಣವಾಗಿರುವ ತಳುಕಿನ ತಿಮ್ಮಕ್ಕಗೆ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಕರ್ನಾಟಕ ಮಹಿಳಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ತಳುಕಿನ ತಿಮ್ಮಕ್ಕಳಿಗೆ ಇಬ್ಬರು ಮಕ್ಕಳಿದ್ದು ಅದರಲ್ಲಿ ಒಂದು ಗಂಡು, ಒಂದು ಹೆಣ್ಣಿದ್ದು ಇಬ್ಬರೂ ತೀರಿಕೊಂಡಿದ್ದಾರೆ. ಪ್ರಸ್ತುತ ಮೊಮ್ಮಗಳು ಪಾಲಕ್ಕನೇ ತಿಮ್ಮಕ್ಕರ ಆರೋಗ್ಯ ಜವಾಬ್ದಾರಿಯನ್ನು ಹೊತ್ತಿದ್ದಾರೆ. ಸರ್ಕಾರ ತಳುಕಿನ ತಿಮ್ಮಕ್ಕನಿಗೆ ಇನ್ನೂ ಹೆಚ್ಚಿನ ಸೌಲಭ್ಯ ಕಲ್ಪಿಸಿಕೊಂಡುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

### ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ನ್ಯಾ. ಸಮೀರ್ ಪಿ.ನಂದ್ಯಾಲ



» ಚಳ್ಳಕೆರೆ

ಭೂಮಿರಕ್ಷಣೆನಮ್ಮೆಲ್ಲರಹೊಣೆಯಾಗಬೇಕುಎಂದು ಸಿವಿಲ್ ನ್ಯಾಯಾಲಯದ ಹಿರಿಯನ್ಯಾಯಾಧೀಶ ಸಮೀರ್ ಪಿ.ನಂದ್ಯಾಲ ತಿಳಿಸಿದರು.
ಅವರು, ನ್ಯಾಯಾಲಯದ ಆವರಣದಲ್ಲಿ ನ್ಯಾಯಾಂಗ ಇಲಾಖೆ, ವಕೀಲರ ಸಂಘ ಹಾಗೂ ಅರಣ್ಯ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ವಿಶ್ವಭೂಮಿದಿನಾಚರಣೆ ಕಾರ್ಯಕ್ರಮವನ್ನು ಗಿಡ ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ನಾವೆಲ್ಲರೂ ಪರಿಸರ ಪ್ರೇಮಿಗಳಾಗಬೇಕು ಪರಿಸರದಿಂದ ಮಾತ್ರ ನಾವೆಲ್ಲರೂ ಬದುಕುಬಹುದಾಗಿದೆ. ಪರಿಸರ ನಾಶವನ್ನು ತಡೆಗಟ್ಟಬೇಕು, ಪರಿಸರವನ್ನು ಉಳಿಸುವತ್ತ ಗಮನ ನೀಡಬೇಕೆಂದರು. ಜೆಎಂಎಫ್‌ಸಿ ನ್ಯಾಯಾದೀಶೆ ಎಚ್.ಆರ್. ಹೇಮಾ ಮಾತನಾಡಿ, ವಿಶ್ವಭೂಮಿ ದಿನಾಚರಣೆ ಅಂಗವಾಗಿ ನಾವೆಲ್ಲರೂ ಸಾಧ್ಯವಾದಷ್ಟು ಗಿಡನೆಟ್ಟು ಪೋಷಣೆ ಮಾಡುವ ಮೂಲಕ ಈ ಕಾರ್ಯಕ್ರಮದ ಮಹತ್ವವನ್ನು ಹೆಚ್ಚಿಸಬೇಕು ಎಂದರು. ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಮಾತನಾಡಿದರು. ನಗರಸಭೆ ಆರೋಗ್ಯ ನಿರೀಕ್ಷಕಿ ಗೀತಾಕುಮಾರಿ, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು, ಉಪಾಧ್ಯಕ್ಷ ಬಿ.ಪಾಲಯ್ಯ, ಖಜಾಂಚಿ ರುದ್ರಯ್ಯ, ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಸರೋಜಮ್ಮ ನಿಧನ

» ಚಿತ್ರದುರ್ಗ

ನಗರದ ಎಸ್.ಬಿ.ಕಾಲೋನಿ ನಿವಾಸಿ ಸರೋಜಮ್ಮ ಶಿವಶಂಕರ್(85) ಭಾನುವಾರ ಬೆಳಿಗ್ಗೆ ತಮ್ಮ ನಿವಾಸದಲ್ಲಿ ನಿಧನರಾದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮ ಹೊಳಲ್ಕೆರೆ ತಾಲ್ಲೂಕು ಚಿತ್ತಹಳ್ಳಿಯಲ್ಲಿ ಭಾನುವಾರ ಮೃತರ ಅಂತ್ಯಸಂಸ್ಕಾರ ನಡೆಯಿತೆಂದು ಕುಟುಂಬದವರು ತಿಳಿಸಿದ್ದಾರೆ.



# ಅಕ್ರಮ ಕ್ರಷರ್‌ಗಳ ಆರ್ಭಟಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಉಪಲೋಕಾಯುಕ್ತ ಸೂಚನೆ

» ದಾವಣಗೆರೆ

ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ನಗರದ ಗಣಿ ಮತ್ತು ಭೂ ವಿಜ್ಞಾನ, ಪ್ರಾದೇಶಿಕ ಸಾರಿಗೆ ಹಾಗೂ ಬೆಸ್ಕಾಂ ಕಚೇರಿಗಳಿಗೆ ಬುಧವಾರ ಸಂಜೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಜಿಲ್ಲೆಯಲ್ಲಿನ ಕಲ್ಲು ಗಣಿಗಾರಿಕೆ ಹಾಗೂ ಅಕ್ರಮ ಕ್ರಷರ್‌ಗಳ ಆರ್ಭಟಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೊದಲಿಗೆ ಗಣಿ ಇಲಾಖೆ ಕಚೇರಿ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ಜಿಲ್ಲೆಯಲ್ಲಿ ಪರವಾನಿಗೆ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳ ಮಾಹಿತಿಯನ್ನು ಎಷ್ಟು ಎಂದು ಪ್ರಶ್ನಿಸಿದರು. ಜಿಲ್ಲೆಯಲ್ಲಿ 128 ಕ್ಕೂ ಹೆಚ್ಚು ಕ್ರಷರ್‌ಗಳಿಗೆ ಪರವಾನಿಗೆ ನೀಡಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು. ಪರವಾನಗಿ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳು ಸರಿಯಾಗಿ ರಾಜಧನ ಪಾವತಿಸಿವೆಯೇ.? ಎಷ್ಟು ರಾಜಧನ ಸರ್ಕಾರಕ್ಕೆ ಸಂದಾಯವಾಗಿದೆ, ಎಷ್ಟು ನಿಂತಿವೆ ಎನ್ನುವ ಮಾಹಿತಿಯನ್ನು ಲೋಕಾಯುಕ್ತಕ್ಕೆ ನೀಡುವಂತೆ ಅವರು ನಿರ್ದೇಶಿಸಿದರು. ಕಲ್ಲುಕ್ವಾರಿಗಳ ಸುತ್ತ ತಂತಿ ಬೇಲಿ ಅಳವಡಿಸಬೇಕು. ಕ್ರಷರ್‌ಗಳು ಹೆಚ್ಚು ವಾಯುಮಾಲಿನ್ಯವಾಗದಂತೆ ಕಲ್ಲುಗಳನ್ನು ಪುಡಿ ಮಾಡಬೇಕು. ಈ ಸಂಬಂಧವಾಗಿ ಎಲ್ಲಾ ನಿಯಮಗಳನ್ನು ಪಾಲನೆ ಮಾಡಲಾಗುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು ಎಂದು ನ್ಯಾ.ಬಿ.ವೀರಪ್ಪ ಹೇಳಿದರು. ಉಪಲೋಕಾಯುಕ್ತರ ಭೇಟಿ ವೇಳೆ ದಾವಣಗೆರೆ ತಾಲ್ಲೂಕಿನ ಗಣಿ ಇಲಾಖೆ ಅಧಿಕಾರಿ ರಜೆ ಮೇಲೆ ತೆರಳಿದ್ದರು. ಇತರೆ ಅಧಿಕಾರಿಗಳು ಸರಿಯಾದ ಮಾಹಿತಿಯನ್ನು ನ್ಯಾಯಮೂರ್ತಿಗಳಿಗೆ ನೀಡಲಿಲ್ಲ.



**ಬಂಗಾರ ಹಾಗೂ ದುಬಾರಿ ವಾಚು :** ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪನವರ ಗಣಿ ಇಲಾಖೆ ಕಚೇರಿ ಭೇಟಿ ಸಂದರ್ಭದಲ್ಲಿ ಗಣಿ ಇಲಾಖೆಯ ಅಧಿಕಾರಿಯೊಬ್ಬರು ಲಕ್ಷ ಲಕ್ಷ ಬಂಗಾರ ಖರೀದಿಸಿದ ಬಿಲ್‌ಗಳು ಅವರ ವಾಹನದಲ್ಲಿ ದೊರತಿವೆ. ಇವುಗಳನ್ನು ಪರಿಶೀಲಿಸಿ, ಬಿಲ್‌ನ ಪ್ರತಿ ಪಡೆದುಕೊಂಡ ನ್ಯಾಯಮೂರ್ತಿಗಳು ಸಂಬಂಧ ಪಟ್ಟ ಅಧಿಕಾರಿಗೆ ಬಂಗಾರ ಖರೀದಿ ವ್ಯಾವಹಾರ ಸಂಪೂರ್ಣ ವಿವರವನ್ನು ಲೋಕಾಯಕ್ತಕ್ಕೆ ನೀಡುವಂತೆ ತಾಕೀತು ಮಾಡಿದರು. ಇದೇ ವೇಳೆ ಸಿಕ್ಕ ವಾಚು ನ್ಯಾ.ಬಿ.ವೀರಪ್ಪ ಅವರ ಗಮನ ಸೆಳೆಯಿತು. ನೋಡಲು ಲಕ್ಷ ಲಕ್ಷ ಬೆಲೆಬಾಳುವಂತೆ ವಾಚು ಕಂಡುಬರುತ್ತಿತ್ತು. ಈ ಕುರಿತು ಸಿಬ್ಬಂದಿಯನ್ನು ವಿಚಾರಿಸಿ, ಆನ್‌ಲೈನ್‌ನಲ್ಲಿ ವಾಚಿನ ಬೆಲೆ ಪರಿಶೀಲಿಸಿದಾಗ ಹೆಚ್ಚಿತ್ತು, ಆದರೆ ಅಂಗಡಿಯಲ್ಲಿ ಪರಿಶೀಲಿಸಿದಾಗ ಅಷ್ಟೊಂದು ಬೆಲೆ ಬಾಳದ ವಾಚು ಎಂಬುದು ಕಂಡುಬಂದಿತು.

ನಂತರ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳ ಕಚೇರಿ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ, ಜಿಲ್ಲೆಯಲ್ಲಿ ಒಟ್ಟು ನೊಂದಾಯಿತ ವಾಹನಗಳ ಸಂಖ್ಯೆ, ಶಾಲಾ ವಾಹನಗಳು ಹಾಗೂ ಅದಿರು ಸಾಗಾಣಿಕೆ ವಾಹನಗಳ ಮಾಹಿತಿ ಪಡೆದುಕೊಂಡರು. ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳಿಂದ ಕಲ್ಲಿನ ಪುಡಿಗಳನ್ನು ಸಾಗಾಟ ಮಾಡುವ ವಾಹನಗಳಿಗೆ ಜಿಪಿಎಸ್ ಅಳವಡಿಸುವಂತೆ ಹಾಗೂ ಅವುಗಳ ಓಡಾಟದ ಬಗ್ಗೆ ನಿಖರ ಮಾಹಿತಿ ಪಡೆದುಕೊಳ್ಳುವಂತೆ ಸಾರಿಗೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಬೆಸ್ಕಾಂ ಕಚೇರಿಗೆ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ರೈತರಿಗೆ ಸರಬರಾಜು ಮಾಡುವ ಉಚಿತ ವಿದ್ಯುತ್ ಕುರಿತು ಮಾಹಿತಿ ಪಡೆದರು. ರಾತ್ರಿ ವೇಳೆ ಕ್ರಷರ್‌ಗಳು ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದು ಕಾರ್ಯಾಚರಣೆ ನಡೆಸುತ್ತಿರುವುದಾಗಿ ಆರೋಪಗಳು ಕೇಳಿ ಬಂದಿವೆ. ಬೆಸ್ಕಾಂ ಅಧಿಕಾರಿಗಳು ಇದಕ್ಕೆ ಅವಕಾಶ ನೀಡದಂತೆ ಅವರು ಸೂಚಿಸಿದರು.

ವೇಳೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ. ಎನ್. ಲೋಕೇಶ್, , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ. ಮಂಜುನಾಥ್, ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ್, ಉಪ ನಿಬಂಧಕರಾದ ಅರವಿಂದ.ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಾಪೂರೆ, ಉಪವಿಭಾಗಾಧಿಕಾರಿ ಸೋತೋಷ್ ಸೇರಿದಂತೆ ಜಿಲ್ಲೆಯ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ಮತ್ತಿತರರು ಹಾಜರಿದ್ದರು.

## ಶೀಘ್ರ ಪ್ರಕರಣಗಳ ಇತ್ಯರ್ಥಕ್ಕೆ ಅಧಿಕಾರಿಗಳಿಗೆ ಗಡುವು

» ದಾವಣಗೆರೆ

ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ನಗರದ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ಶುಕ್ರವಾರ, ಜಿಲ್ಲೆಗೆ ಸಂಬಂಧಿಸಿದಂತೆ ಲೋಕಾಯುಕ್ತದಲ್ಲಿ ಬಾಕಿ ಇದ್ದ 114 ಪ್ರಕರಣಗಳ ವಿಚಾರಣೆಯನ್ನು ನಡೆಸಿ, ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಅಧಿಕಾರಿಗಳಿಗೆ ಗಡುವು ನೀಡಿದರು.

ಆರಂಭದಲ್ಲಿ ಜಿಲ್ಲೆಗೆ ಸಂಬಂಧಿಸಿದಂತೆ ದಿನಪತ್ರಿಕೆ ವರದಿ ಆಧರಿಸಿ ಲೋಕಾಯುಕ್ತದಲ್ಲಿ ದಾಖಲಿಸಿಕೊಂಡ ಸ್ವಯಂಪ್ರೇರಿತ ದೂರಗಳ ವಿಚಾರಣೆಯನ್ನು ನ್ಯಾ.ಬಿ.ವೀರಪ್ಪ ಕೈಗೆತ್ತಿಕೊಂಡರು.

ಕನ್ನಡ ಪ್ರಭ ದಿನಪತ್ರಿಕೆ ಹರಿಹರ ನಗರಸಭೆಯ ದಾಖಲೆಗಳ ಸಂಗ್ರಹ ಕೊಠಡಿಯ ಅವ್ಯವಸ್ಥೆಯ ಬಗ್ಗೆ ವರದಿ ಪ್ರಕಟಿಸಿತ್ತು. ದಾಖಲೆಗಳ ಸಂಗ್ರಹದ ಕೊಠಡಿಯ ಬಾಗಿಲು ಗೆದ್ದಲು ತಿಂದಿದೆ. ನಗರ ಸಭೆಯ ಅತಿಮುಖ್ಯ ಕಡತಗಳಿಗೆ ಗೆದ್ದಲು ಹಿಡಿಯುತ್ತಿವೆ. ಅಧಿಕಾರಿಗಳು ಈ ಕುರಿತು ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿತ್ತು. ಈ ಕುರಿತು ಹರಿಹರ ನಗರ ಸಭೆಯ ಆಯುಕ್ತರು ಸೇರಿದಂತೆ ಅಧಿಕಾರಿಗಳನ್ನು ನ್ಯಾ.ಬಿ.ವೀರಪ್ಪ ಪ್ರಶ್ನಿಸಿದರು. ದಾಖಲೆಗಳ ಕೊಠಡಿಯನ್ನು ದುರಸ್ತಿಗೊಳಿಸಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು. ಆದರೂ ಲೋಕಾಯುಕ್ತ ಡಿವೈಎಸ್ಪಿ ಸ್ಥಳ ಪರಿಶೀಲನೆ ಮಾಡಿ ವರದಿ ನೀಡುವಂತೆ ನ್ಯಾ.ಬಿ.ವೀರಪ್ಪ ಸೂಚಿಸಿದರು.



ಮಾಯಕೊಂಡ ಗ್ರಾಮದ ಪರಿಶಿಷ್ಟ ಜಾತಿ ಹಾಗೂ ಪಂಗಡದ ವಸತಿಶಾಲೆಯಲ್ಲಿ ಆಹಾರ ಸೇವಿಸಿ 38 ಮಕ್ಕಳು ಅಸ್ವಸ್ಥಗೊಂಡ ಕುರಿತು ಸಂಯುಕ್ತ ಕರ್ನಾಟಕ ಪತ್ರಿಕೆ ವರದಿ ಆಧರಿಸಿ ಮುಖ್ಯೋಪಾಧ್ಯಯರ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ನಿಲಯ ಪಾಲಕರು ಸರಿಯಾದ ರೀತಿಯಲ್ಲಿ ಆಹಾರವನ್ನು ಬೇಯಿಸದೇ ಮಕ್ಕಳಿಗೆ ನೀಡಿದ್ದರಿಂದ ಅಚಾತುರ್ಯ ಘಟನೆ ನಡೆದಿದೆ. ನಿಲಯ ಪಾಲಕರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ವಹಿಸುವುದಾಗಿ ಮುಖ್ಯ ಶಿಕ್ಷಕಿ ತಿಳಿಸಿದರು.

ಕನ್ನಡ ಪ್ರಭ ದಿನಪತ್ರಿಕೆ ದಿನಾಂಕ 25/02/2025 ರಂದು ಸ್ವಚ್ಚತೆ ಮರೆತ ಚನ್ನಗಿರಿ ಪುರಸಭೆ ಎಂದು ವರದಿ ಪ್ರಕಟಿಸಿತ್ತು. ಇದನ್ನು ಆಧರಿಸಿ ದೂರು ದಾಖಲಿಸಿಕೊಂಡಿದ್ದ ಉಪ ಲೋಕಾಯುಕ್ತರು ಪುರಸಭೆ ಮುಖ್ಯಾಧಿಕಾರಿಯನ್ನು ಪ್ರಶ್ನಿಸಿದರು. ಪುರಸಭೆ ವ್ಯಾಪ್ತಿಯ ಸ್ವಚ್ಛತಾ ಕಾರ್ಯಕೈಗೊಂಡ ಬಗ್ಗೆ ವಿವರವಾದ ವರದಿಯನ್ನು ಲೋಕಾಯುಕ್ತ ನೀಡುವಂತೆ ಸೂಚಿಸಿದರು.

## ಗೋನೂರು ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಅಂಬೇಡ್ಕರ್ ಜಯಂತಿ



» ಚಿತ್ರದುರ್ಗ

ಗೋನೂರು ಸಮೀಪವಿರುವ ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134 ನೇ ಜಯಂತಿಯನ್ನು ಆಚರಿಸಲಾಯಿತು. ಬಾಲ್ಯದಿಂದಲೆ ಅಂಬೇಡ್ಕರ್‌ರವರು ಸಾಕಷ್ಟು ಅವಮಾನ, ಹಿಂಸೆ, ಅಸ್ಪೃಶ್ಯತೆಯನ್ನು ಅನುಭವಿಸಿ ಸಂವಿಧಾನ ರಚಿಸಿ ದೇಶಕ್ಕೆ ಕೊಡುಗೆಯಾಗಿ ನೀಡಿದ್ದರ ಪರಿಣಾಮವಾಗಿ ಎಲ್ಲಾ ಜಾತಿ ಧರ್ಮದವರು ಸಮಾನವಾಗಿ ಬಾಳಲು ಅವಕಾಶ ಸಿಕ್ಕಿದೆ. ಪ್ರತಿಯೊಬ್ಬರು ಡಾ.ಬಿ.ಆರ್.ಅಂಬೇಡ್ಕರ್‌ರವರ ಆಸೆಯಂತೆ ಶಿಕ್ಷಣ, ಸಂಘಟನೆ, ಹೋರಾಟಕ್ಕೆ ಗಮನ ಕೊಡಬೇಕೆಂದು ನಿರಾಶ್ರಿತರ ಪರಿಹಾರ ಕೇಂದ್ರದ ಅಧೀಕ್ಷಕ ಮಹದೇವಯ್ಯ ತಿಳಿಸಿದರು. ಅಂಬೇಡ್ಕರ್ ಜಯಂತಿ ಅಂಗವಾಗಿ ಪರಿಹಾರ ಕೇಂದ್ರದಲ್ಲಿನ ನಿರಾಶ್ರಿತರಿಗೆ ಸಿಹಿ ಊಟ ಬಡಿಸಲಾಯಿತು.

## ಪ್ರಮುಖ ಸುದ್ದಿ

### ಹೊಸದುರ್ಗ ಪುರಸಭೆ ಮುಖ್ಯಾಧಿಕಾರಿ ಜಿ.ವಿ. ತಿಮ್ಮರಾಜು ಹೃದಯಾಘಾತದಿಂದ ನಿಧನ

# ಮುಗಿಲು ಮುಟ್ಟಿದ ಪತ್ನಿ ಹಾಗೂ ಕುಟುಂಬಸ್ತರ ಆಕ್ರಂಧನ

» ಹೊಸದುರ್ಗ

ಲೋಕಾಯುಕ್ತರ ಬಲೆಗೆ ಸಿಕ್ಕಿ ಬಂಧನಕ್ಕೊಳಗಾಗಿದ್ದ ಪುರಸಭೆ ಮುಖ್ಯಾಧಿಕಾರಿ ಜಿ.ವಿ ತಿಮ್ಮರಾಜು (40) ಅವರು ಹೃದಯಾಘಾತದಿಂದ ಶನಿವಾರ ಬೆಳಿಗ್ಗೆ 8.30 ಕ್ಕೆ ಮೃತಪಟ್ಟಿದ್ದಾರೆ.



ಚಿತ್ರದುರ್ಗ ಉಪ ಬಂಧಿಖಾನೆಯಲ್ಲಿದ್ದಾಗ ಶನಿವಾರ ಬೆಳಿಗ್ಗೆ 7.50 ಕ್ಕೆ ಹೃದಯಾಘಾತವಾಗಿದೆ. ಕೂಡಲೇ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದ್ದು. ಚಿಕಿತ್ಸೆ ಫಲಕಾರಿಯಾಗದೆ ಬೆಳಿಗ್ಗೆ 8.30 ಕ್ಕೆ ಮೃತಪಟ್ಟಿದ್ದಾರೆ.

ಘಟನೆ ವಿವರ : ಏ.21 ರಂದು ಸೋಮವಾರ ಮುಖ್ಯಾಧಿಕಾರಿ ಜಿ.ವಿ. ತಿಮ್ಮರಾಜು ಅವರು ಪುರಸಭೆ ಸದಸ್ಯ ಶಂಕರಪ್ಪ ಎಂಬುವವರಿಂದ  25 ಸಾವಿರ ಹಣ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿ, ಬಂಧಿಸಿದ್ದರು.

ಜಿ.ವಿ ತಿಮ್ಮರಾಜು ಪರಿಸರ ಇಂಜಿನಿಯರ್ ಆಗಿ ಗೌರಿಬಿದನೂರು, ಚಿಕ್ಕಬಳ್ಳಾಪುರ, ಮಾಲೂರು, ಶಿಡ್ಲಘಟ್ಟದಲ್ಲಿ ಕಾರ್ಯನಿರ್ವಹಿಸಿದ್ದರು. ಅಲ್ಲಿಂದ ಬಂದು ಸುಮಾರು ವರ್ಷಗಳ ಕಾಲ ಹೊಸದುರ್ಗದ ಪುರಸಭೆಯಲ್ಲಿ ಪರಿಸರ ಅಭಿಯಂತರರಾಗಿ ಕಾರ್ಯ ನಿರ್ವಹಿಸಿದ್ದರು ಈ ಕಳೆದ ಎರಡು ವರ್ಷಗಳಿಂದ ಪುರಸಭೆ ಮುಖ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಪತ್ನಿ ಕಾವ್ಯ ಅವರು ಪುರಸಭೆಯಲ್ಲಿ ಡಿಟಿಪಿ ಆಪರೇಟರ್ ಆಗಿ ಹೊರಗುತ್ತಿಗೆ ನೌಕರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ದಂಪತಿಗಳಿಗೆ 6 ನೇ ತರಗತಿ ಓದುತ್ತಿರುವ ಒಬ್ಬಳೆ ಮಗಳಿದ್ದಾರೆ. ಜಿ.ವಿ ತಿಮ್ಮರಾಜು ಅವರಿಗೆ ಮಧುಮೇಹ ಹಾಗೂ ಹೃದಯ ಸಂಬಂಧಿ ಖಾಯಿಲೆಯಿದ್ದು, ನಿತ್ಯ ಮಾತ್ರೆ ತೆಗೆದುಕೊಳ್ಳುತ್ತಿದ್ದರು.

ಅಜ್ಜಿಯ ಸಾವಿನಿಂದ ವಿಚಲಿತರಾಗಿದ್ದರು: ಲೋಕಾಯುಕ್ತರ ಬಲೆಗೆ ಸಿಕ್ಕಿಬಿದ್ದು ಅರೆಸ್ಟ್ ಆಗಿ ಬಂಧನಕ್ಕೊಳಗಾಗಿರುವ ತನ್ನ ಮಮ್ಮೊಗನ ವಿಷಯವನ್ನ ಕೇಳಿದ ತಿಮ್ಮರಾಜು ಅವರ ಅಜ್ಜಿ ಎದೆ ಎದೆ ಬಡಿದುಕೊಂಡು ಗೋಳಾಡುತ್ತಿದ್ದ ಸಂಧರ್ಬದಲ್ಲಿ ಕುಸಿದು ಬಿದ್ದು ಹೃದಯಾಘಾತದಿಂದ ತಾಲೂಕಿನ ಶ್ರೀರಾಂಪುರ ಹೋಬಳಿ ಖಾಳನಾಯಕನಹಟ್ಟಿ (ಗರೀಂಬೀಳು) ಗ್ರಾಮದಲ್ಲಿ ಮಂಗಳವಾರ ಬೆಳಿಗ್ಗೆ ಸುಮಾರು 7.30 ರಲ್ಲಿ ಮೃತ ಪಟ್ಟಿದ್ದರು. ಅಜ್ಜಿಯ ಅಂತ್ಯ ಸಂಸ್ಕಾರಕ್ಕೂ ಸಹಾ ತಿಮ್ಮರಾಜುಗೆ ಹೋಗಲು ಅವಕಾಶವಾಗಿರಲಿಲ್ಲ,

ಮಗಳಿಗೆ ಸುಳ್ಳು ಹೇಳುವಂತಾಯಿತು: ಲೋಕಯುಕ್ತರಿಂದ ಬಂಧನಕ್ಕೊಳಗಾಗಿರುವ ವಿಷಯ ಮಗಳಿಗೆ ಗೊತ್ತಿರಲಿಲ್ಲ ಅವಳನ್ನು ಅದೇ ಅವರ ಸಂಬಂಧೀಕರ ಮನೆಗೆ ಕಳುಹಿಸಿಕೊಡಲಾಗಿತ್ತು, ಮರು ದಿನ ಮಗಳು ತನ್ನ ತಾಯಿಗೆ ಪೋನ್ ಮಾಡಿ ಪಪ್ಪನ ಕಡೆ ಪೋನ್ ಕೋಡು ಮಾತನಾಡಬೇಕು ಎಂದಾಗ ನಿಮ್ಮ ಪಪ್ಪ ಟ್ರೈನಿಂಗ್ ಹೋಗಿದ್ದಾರೆ ಬರುತ್ತಾರೆ ಎಂದು ಹೇಳುತ್ತಲೇ ಇದ್ದರು, ಮಗಳು ತೀರಾ ಹಠ ಹಿಡಿದಾಗ ಮಗಳ ಜೋತೆ ದೂರವಾಣಿಯ ಮೂಲಕ ಮಾತನಾಡಿದ್ದಾರೆ ಮತ್ತೆ ಗುರುವಾರ ಹಾಗೂ ಶುಕ್ರವಾರ ಸಂಜೆ ಮಗಳು ಪೋನ್ ಮಾಡಿ ಮಾತನಾಡಿದಾಗ ನಾನು ತರಬೇತಿಯಲ್ಲಿ ಇದ್ದೇನೆ ಟ್ರೈನಿಂಗ್ ಮುಗಿದ ತಕ್ಷಣ ಮನೆಗೆ ಬರುತ್ತೇನೆ ಎಂದು ಮಗಳಿಗೆ ಸುಳ್ಳು ಹೇಳುತ್ತಿದ್ದರು. ಅಪ್ಪನನ್ನ ವಿಪರೀತವಾಗಿ ಹಚ್ಚಿಕೊಂಡಿದ್ದ ಮಗಳು ಸಾಕಷ್ಟು ಭಾರಿ ಊಟ ಮಾಡದೆ ಹಾಗೆಯೇ ದಿನ ಕಳೆದಿದ್ದಾಳೆ, ಶನಿವಾರ ಬೆಳಿಗ್ಗೆ ಚಿತ್ರದುರ್ಗದ ಆಸ್ಪತ್ರೆಗೆ ಹೋಗಿ ನೋಡಿದಾಗಲೇ ಮಗುವಿಗೆ ನನ್ನ ಪಪ್ಪ ಚಿರನಿದ್ರೆಗೆ ಹೋಗಿದ್ದಾರೆ ಎಂಬ ಅರಿವಾಗಿದೆ ತಂದೆಯನ್ನು ನೋಡಿದ ಮಗು ಸುಮಾರು ಗಂಟೆಗಳ ಕಾಲ ಅಲ್ಲಿಯೇ ಮೌನವಾಗಿ ಕುಳಿತು ಬಿಕ್ಕಿ ಬಿಕ್ಕಿ ಅಳುತ್ತಿದ್ದ ದೃಶ್ಯ ಕರುಳು ಹಿಂಡುವಂತಿತ್ತು, ತಿಮ್ಮರಾಜು ಪತ್ನಿ ಕಾವ್ಯ ಹಾಗು ಅವರ ಸಂಬಂಧಿಕರ ಅಕ್ರಂಧನ ಮುಗಿಲು ಮುಟ್ಟುವಂತಿತ್ತು. ಒಟ್ಟಾರೆ ಒಂದೇ ವಾರದಲ್ಲಿ ಒಂದೇ ಕುಟುಂಬದ ಇಬ್ಬರು ಸಾವಿಗೆ ಬಲಿಯಾಗಿರುವುದು ಎಂಥವರ ಕಣ್ಣಲ್ಲೂ ಸಹಾ ನೀರು ತರಿಸುತ್ತದೆ ಅಜ್ಜಿ ಮತ್ತು ಮಮ್ಮೊಗ ಇಬ್ಬರೂ ಸಹಾ ಬಾರದ ಲೋಕಕ್ಕೆ ಪ್ರಯಾಣ ಬೆಳಸಿರುವುದು ವಿಷಾದಕರ.

## ಹೊಸದುರ್ಗ ಪುರಸಭೆ ಮುಂದೆ ಪ್ರತಿಭಟನೆ

» ಹೊಸದುರ್ಗ

ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತ ತಿಮ್ಮರಾಜು ಸಂಬಂಧಿಕರು ಪಟ್ಟಣದ ಪುರಸಭೆಯ ಮುಂದೆ ಭಾನುವಾರ ಬೆಳಿಗ್ಗೆ ನೂರಾರು ಮಹಿಳೆಯರು ಹಾಗು ಪುರುಷರು ತಿಮ್ಮರಾಜು ಸಾವಿಗೆ ಕಾರಣರದವರನ್ನ ಬಂಧಿಸಿ ನ್ಯಾಯ ಕೋಡಿಸಿ ತಿಮ್ಮರಾಜು ಆತ್ಮಕ್ಕೆ ಶಾಂತಿ ದೋರಕಿಸಿ ಎಂದು ಪೋಲಿಸರ ಮುಂದೆ ಅಂಗಲಾಚಿದರು

ತಿಮ್ಮರಾಜು ಅವರನ್ನ ಲೋಕಾಯುಕ್ತ ಬಲೆಗೆ ಷಡ್ಯಂತ್ರ ಮಾಡಿ ಬೀಳಿಸಿದ ಪುರಸಭಾ ಸದಸ್ಯರನ್ನ ಸ್ಥಳಕ್ಕೆ ಕರೆಸುವಂತೆ ಪ್ರತಿಭಟನಾಕಾರರು ಪಟ್ಟು ಹಿಡಿದರು. ತಿಮ್ಮರಾಜು ಸಾವಿಗೆ ನ್ಯಾಯ ಬೇಕು ಎಂದು ಆಗ್ರಹಿಸಿದರು ಇಲ್ಲವಾದರೆ ಶವವನ್ನ ತಂದು ಪುರಸಭೆಯ ಮುಂದೆ ಇಟ್ಟು ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದರು.



ವಿಷಯ ತಿಳಿದು ಸ್ಥಳಕ್ಕೆ ಆಗಮಸಿದ ಸಿಪಿಐ ರಮೇಶ್ ಪ್ರತಿಭಟನಾಕಾರರ ಮನವೊಲಿಸಿ ಕಾನೂನಿನಲ್ಲಿ ಅವರಿಗೆ ಏನು ಆಗಬೇಕೋ ಅದು ಹಾಗೇಹಾಗುತ್ತದೆ ಈ ಪ್ರತಿಭಟನೆಯನ್ನ ಇಲ್ಲಿಗೆ ನಿಲ್ಲಿಸಿ ಮೊದಲು ಮುಂದೆ ನಡೆಯಲಿರುವ ಅಂತ್ಯಕ್ರಿಯೆಯನ್ನ ಮುಗಿಸಿ ನ್ಯಾಯ ದೊರಕಿಸಿಕೊಡುವಲ್ಲಿ ನಾವೂ ಸಹಾ ಕಾನೂನು ಬದ್ದವಾಗಿ ಸಹಕರಿಸುತ್ತೇವೆ ಎಂಬ ಭರವಸೆ ನೀಡಿದ ನಂತರ ಪ್ರತಿಭಟನೆಯನ್ನ ಹಿಂಪಡೆಯಲಾಯಿತು.

ನಂತರ ಕೆಲವು ಗಂಟೆಗಳ ಕಾಲ ತಿಮ್ಮರಾಜು ಪಾರ್ಥಿವ ಶರೀರವನ್ನ ಸಾರ್ವಜನಿಕರ ಅಂತಿಮ ದರ್ಶನಕ್ಕಾಗಿ ಒಂದು ಗಂಟೆಗೂ ಹೆಚ್ಚು ಕಾಲ ಪೋಲಿಸ್ ಬಿಗಿ ಭದ್ರತೆಯಲ್ಲಿ ಇರಿಸಿ ನಂತರ ಅವರ ಸ್ವಗ್ರಾಮವಾದ ತಾಲೂಕಿನ ಶ್ರೀರಾಂಪುರ ಹೋಬಳಿ ಗರೀಂಬೀಳು ಗ್ರಾಮದ ಸಮೀಪವಿರುವ ಅವರ ಜಮೀನಿನಲ್ಲಿ ಪತ್ನಿ. ಮಗಳು, ಸಹೋದರು ಅಕ್ಕತಂಗಿಯರು ಮತ್ತು ಕುಟುಂಬಸ್ಥರು ಸೇರಿದಂತೆ ಅಪಾರ ಜನರ ಸಮ್ಮುಖದಲ್ಲಿ ಭಾನುವಾರ ಮದ್ಯಾಹ್ನ ಅಂತ್ಯ ಸಂಸ್ಕಾರ ಮಾಡಲಾಯಿತು. ಅಂತ್ಯ ಸಂಸ್ಕಾರ ಸಂಧರ್ಬದಲ್ಲಿ ಜಿಲ್ಲೆಯ ಎಲ್ಲಾ ತಾಲೂಕಿನ ಪುರಸಭಾ ಸಿಬ್ಬಂದಿ ವರ್ಗ, ನೌಕರರವರ್ಗ, ಗೌರಿಬಿದನೂರು, ಚಿಕ್ಕಬಳ್ಳಾಪುರ, ಮಾಲೂರು, ಶಿಡ್ಲಘಟ್ಟ ಸೇರಿದಂತೆ ಅನೇಕ ಕಡೆಯ ಪುರಸಭಾ ಸಿಬ್ಬಂಧಿ ವರ್ಗದವರು ರಾಜ್ಯ ಜಿಲ್ಲಾ ತಾಲೂಕು ಮಟ್ಟದ ಅಧಿಕಾರಿಗಳು ಜನಪ್ರತಿನಿಧಿಗಳು, ಸಹಸ್ರ ಸಂಖ್ಯೆಯ ಸಾರ್ವಜನಿಕರು ಅಂತ್ಯಸಂಸ್ಕಾರದಲ್ಲಿ ಭಾಗಿಯಾಗಿದ್ದರು. ಅಂತ್ಯ ಸಂಸ್ಕರ ಸಂಧರ್ಬದಲ್ಲಿ ತಿಮ್ಮರಾಜು ಪತ್ನಿ ಕಾವ್ಯ, ಅವರ ಮಗಳು ಕುಟುಂಬಸ್ಥರು ಹಾಗು ಅವರ ಸಂಬಂಧಿಕರ ಅಕ್ರಂಧನ ಮುಗಿಲು ಮುಟ್ಟಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T